EMAIL : dairyadadaari@gmail.com ಸಂಪುಟ: 01 ಸಂಚಿಕೆ: 39

ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಗುರುವಾರ: 15–01–2026


## ಸ್ವಚ್ಛತೆಯೇ ನಮಗೆ 'ದಾರಿ ದೀಪ'



ಧೈರ್ಯದ ದಾರಿ

**ರಾಯಚೂರು,ಜ.14–**ರಾಯಚೂರಿನ ದಾರಿ ದೀಪ ಸಂಸ್ಥೆಯ ಪದಾಧಿಕಾರಿಗಳು, ನಗರದ ಯುವಕರು ಒಟ್ಟಿಗೆ ಸೇರಿ ನಗರದ ಶ್ರೀರಾಮ ಮಂದಿರದ ಹಿಂಭಾಗದಲ್ಲಿರುವ ಪುರಾತನ ಬಾವಿಯನ್ನು ಸ್ವಚ್ಛಗೊಳಿಸಿ, ಅದರ ಐತಿಹಾಸಿಕ ಮಹತ್ವವನ್ನು ಎತ್ತಿಹಿಡಿದಿರುವುದು ನಿಜಕ್ಕೂ ಅನುಕರಣೀಯ ಕಾರ್ಯ. ಯುವಕರು, ಪದಾಧಿಕಾರಿಗಳ ಈ ಶ್ಲಾಘನೀಯ ಕಾರ್ಯಕ್ಕಾಗಿ ಅವರನ್ನು ರಾಯಚೂರು ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೀ ಕುಮಾರ ನಾಯಕ್ ಅವರ ಕಚೇರಿಯಲ್ಲಿ ಹಾರ್ದಿಕವಾಗಿ ಸನ್ಮಾನಿಸಲಾಯಿತು.
ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಶ್ರೀ ಮಹಮ್ಮದ್ ಶಾಲಂ, ಶ್ರೀ ಶಾಂತಪ್ಪ, ಶ್ರೀ ಜಯಣ್ಣ, ಶ್ರೀ ಶ್ರೀನಿವಾಸ್ ರೆಡ್ಡಿ, ಶ್ರೀ ಯೂಸುಫ್ ಖಾನ್ ಉಪಸ್ಥಿತರಿದ್ದರು.

# ವಿಧಾನ ಮಂಡಲದ ವಿಶೇಷ ಅಧಿವೇಶನ

**ಬೆಂಗಳೂರು, ಜ. 14–** ಮನರೇಗಾ ಬದಲಿಗೆ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ವಿಬಿಜಿ ರಾಮ್‌ಜಿ ಕಾಯ್ದೆ ಬಗ್ಗೆ ಚರ್ಚಿಸಲು ಈ ತಿಂಗಳ 27 ರಿಂದ ಮೂರು ದಿನಗಳ ವಿಧಾನಮಂಡಲದ ಅಧಿವೇಶನ ನಡೆಯಲಿದೆ.

ವಿಶೇಷ ಅಧಿವೇಶನಕ್ಕೆ ದಿನಾಂಕ ನಿಗದಿ ಮಾಡಲು ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ವಿಧಾನಸೌಧದ ಸಚಿವ ಸಭಾ ಮಂದಿರದಲ್ಲಿ ನಡೆದ ಸಚಿವ ಸಂಪುಟದ ತುರ್ತು ಸಭೆಯಲ್ಲಿ ವಿಬಿಜಿ ರಾಮ್‌ಜಿ ಕಾಯ್ದೆ ಬಗ್ಗೆ ಚರ್ಚಿಸಲು ವಿಧಾನಮಂಡಲದ ವಿಶೇಷ ಅಧಿವೇಶನ್ನು ಈ ತಿಂಗಳ 27 ರಿಂದ ಮೂರು ದಿನಗಳ ಕಾಲ ನಡೆಸುವ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಉನ್ನತ ಮೂಲಗಳು ಹೇಳಿವೆ.

ಈ ವಿಶೇಷ ಅಧಿವೇಶನದಲ್ಲಿ ವಿಬಿಜಿ ರಾಮ್‌ಜಿ ಕಾಯ್ದೆಯನ್ನು ರದ್ದು ಮಾಡಿ ಮನರೇಗಾ ಕಾಯ್ದೆಯನ್ನೇ ಮರು ಸ್ಥಾಪಿಸುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸುವ ನಿರ್ಣಯವನ್ನು ರಾಜ್ಯಸರ್ಕಾರ ಕೈಗೊಂಡಿದೆ.

ಕಳೆದ ವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ವಿಬಿಜಿ ರಾಮ್‌ಜಿ ಕಾಯ್ದೆಯನ್ನು ವಿರೋಧಿಸಿ ನಿರ್ಣಯವನ್ನು ಕೈಗೊಳ್ಳಲಾಗಿತ್ತು. ಅಲ್ಲದೆ, ಈ ಕಾಯ್ದೆ ವಿರುದ್ಧ ಕಾನೂನು ಹೋರಾಟ ನಡೆಸುವತೀರ್ಮಾನವನ್ನು ರಾಜ್ಯಸರ್ಕಾರ ಕೈಗೊಂಡಿತ್ತು. ಹಾಗೆಯೇ ಮನರೇಗಾ ಮತ್ತು ವಿಬಿಜಿ ರಾಮ್‌ಜಿ



ಕಾಯ್ದೆಯ ಸಾಧಕ ಬಾಧಕಗಳ ಬಗ್ಗೆ ವಿಧಾನಮಂಡಲದ ವಿಶೇಷ ಅಧಿವೇಶನ ಕರೆಯಬೇಕು ಎಂಬ ಚರ್ಚೆಗಳು ನಡೆದಿದ್ದವು. ಅದರಂತೆ ಇಂದು ನಡೆದ ಸಚಿವ ಸಂಪುಟದ ತುರ್ತು ಸಭೆಯಲ್ಲಿ ವಿಬಿಜಿ ರಾಮ್‌ಜಿ ಕಾಯ್ದೆ ಬಗ್ಗೆಚರ್ಚಿಸಲುಈ ತಿಂಗಳ 27 ರಿಂದ 3 ದಿನಗಳ ಕಾಲ ವಿಧಾನಮಂಡಲದ ಅಧಿವೇಶನವನ್ನು ಕರೆಯುವ ತೀರ್ಮಾನವನ್ನು ಕೈಗೊಳ್ಳಲಾಗಿದೆ.

ಮನರೇಗಾ ಯೋಜನೆಯನ್ನು ಬದಲಿಸಿ ವಿಬಿಜಿ ರಾಮ್‌ಜಿ ಕಾಯ್ದೆ ಜಾರಿ ಮಾಡಿರುವುದಕ್ಕೆ ಪ್ರಬಲ ವಿರೋಧ ವ್ಯಕ್ತಪಡಿಸಿರುವ ಕಾಂಗ್ರೆಸ್ ಪಕ್ಷ ರಾಷ್ಟ್ರಾದ್ಯಾಂತ ಈ ಬಗ್ಗೆ ಹೋರಾಟಕ್ಕೆ ಮುಂದಾಗಿದೆ. ರಾಜ್ಯದ ಕಾಂಗ್ರೆಸ್ ಸರ್ಕಾರ ವಿಬಿಜಿ ರಾಮ್‌ಜಿ ಕಾಯ್ದೆ ವಿರುದ್ಧ ಸಮರ ಸಾರಿದ್ದು, ರಾಜ್ಯದಲ್ಲೂ ಮನರೇಗಾ ಬಚಾವ್ ಸಂಗ್ರಾಮವನ್ನು ನಡೆಸಲು ಮುಂದಾಗಿದೆ. ಜತೆಗೆ ಮನರೇಗಾ ಯೋಜನೆಯನ್ನು ರದ್ದು ಮಾಡಿ ವಿಬಿಜಿ ರಾಮ್‌ಜಿ ಕಾಯ್ದೆಯನ್ನು ತಂದಿರುವ ಬಗ್ಗೆ ಕಾನೂನು ಹೋರಾಟಕ್ಕೂ ತೀರ್ಮಾನ ಮಾಡಿದೆ.ಈಗ ಅಧಿವೇಶನದಲ್ಲಿ ವಿಬಿಜಿ ರಾಮ್‌ಜಿ ಕಾಯ್ದೆಯನ್ನು ರದ್ದುಗೊಳಿಸಿ ಮೊದಲಿನಂತೆಮನರೇಗಾ ಯೋಜನೆಯನ್ನು ಜಾರಿ ಮಾಡುವಂತೆ ಕೇಂದ್ರ ಸರ್ಕಾರವನ್ನು ಆಗ್ರಹಿಸುವ ನಿರ್ಣಯ ಕೈಗೊಳ್ಳಲಾಗಿದ್ದು, ವಿಬಿಜಿ ರಾಮ್‌ಜಿ ಸಮರ ಅಧಿವೇಶನವನ್ನು ಕಾವೇರಿಸುವುದು ನಿಶ್ಚಿತ.

ಮೊದಲ ದಿನ ರಾಜ್ಯಪಾಲರ ಭಾಷಣ ನಂತರ ಕಾಯ್ದೆ ಬಗ್ಗೆ ಚರ್ಚೆವರ್ಷದ ಮೊದಲ ವಿಧಾನಮಂಡಲದ ಅಧಿವೇಶನವು ರಾಜ್ಯಪಾಲರ ಭಾಷಣದೊಂದಿಗೆ ಜಂಟಿ ಅಧಿವೇಶನ ನಡೆಸಬೇಕಾಗುತ್ತದೆ. ಹಾಗಾಗಿ ವಿಬಿಜಿ ರಾಮ್‌ಜಿ ಕಾಯ್ದೆ ಕುರಿತು ಚರ್ಚೆಗೆ ಕರೆಯಲಾಗುವ ವಿಶೇಷ ಅಧಿವೇಶನದ ಮೊದಲ ದಿನ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ಭಾಷಣ ಮಾಡುವರು. ಅವರ ಭಾಷಣನಂತರ ಸದನವನ್ನು ಜ. 28ಕ್ಕೆ ಮುಂದೂಡಲಾಗುತ್ತದೆ. ಜ. 28 ಮತ್ತು 29 ರಂದು ವಿಬಿಜಿ ರಾಮ್‌ಜಿ ಕಾಯ್ದೆ ಬಗ್ಗೆ ಚರ್ಚೆ, ಖಂಡನಾ ನಿರ್ಣಯಗಳನ್ನು ಕೈಗೊಳ್ಳಲಾಗುತ್ತದೆ.

ರಾಜ್ಯಪಾಲರ ಭಾಷಣದ ವಂದನಾ ನಿರ್ಣಯದ ಮೇಲಿನ ಚರ್ಚೆ ಬರುವ ಮಾರ್ಚ್‌ನಲ್ಲಿ ನಡೆಯುವ ಬಜೆಟ್ ಅಧಿವೇಶನದಲ್ಲಿ ನಡೆಸಲಾಗುತ್ತದೆ ಎಂದು ಮೂಲಗಳು ಹೇಳಿವೆ.

## ವಿಕಲಚೇತನರ ಪುನರ್ವಸತಿ ಕಾರ್ಯಕರ್ತರಿಗೆ ಕನಿಷ್ಠ ವೇತನ ನೀಡಿ ಸಂಕಲ್ಪ ವಿಕಲಚೇತನರ ಒಕ್ಕೂಟ ರಾಯಚೂರು ವತಿಯಿಂದ ಮನವಿ

ಧೈರ್ಯದ ದಾರಿ

**ಮಾನ್ವಿ,ಜ.14–** ಬೆಂಗಳೂರಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರಾದ ಲಕ್ಷ್ಮಿ ಹೆಬ್ಬಾಳ್ಕರ್ ರವರಿಗೆ ವಿಕಲಚೇತನರ ವಿವಿಧ ನ್ಯಾಯಸಮ್ಮತ ಬೇಡಿಕೆಗಳ ಕುರಿತು ಮನವಿ ಪತ್ರ ಸಲ್ಲಿಸಲಾಗಿದೆ.

ಸಂಕಲ್ಪ ವಿಕಲಚೇತನರ ಒಕ್ಕೂಟ, ರಾಯಚೂರು ವತಿಯಿಂದ ವಿಕಲಚೇತನರ ಮಾಸಿಕ ಪಿಂಚಣಿ, ಉಚಿತ ಬಸ್ ಪಾಸ್, ವಿಕಲಚೇತನರಿಗಾಗಿ ಮೀಸಲಾದ 5% ಅನುದಾನದ ಸಮರ್ಪಕ ಬಳಕೆ, ಹಾಗೂ ವಿಶೇಷವಾಗಿ ಗ್ರಾಮ ಪಂಚಾಯಿತಿ, ಪಟ್ಟಣ, ನಗರ ಮತ್ತು ತಾಲೂಕು ಮಟ್ಟಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪುನರ್ವಸತಿ ಕಾರ್ಯಕರ್ತರ ಹುದ್ದೆಗಳನ್ನು ಶಾಶ್ವತಗೊಳಿಸುವುದು ಅಥವಾ ಕನಿಷ್ಠ ವೇತನ ನಿಗದಿಪಡಿಸುವುದು, ಪ್ರತ್ಯೇಕ ಕಚೇರಿ ಕೊಠಡಿ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಮನವಿ ಪತ್ರದಲ್ಲಿ ಉಲ್ಲೇಖಿಸಲಾಗಿದೆ. ವಿಕಲಚೇ ತನರ ಹಾಗೂ ಪುನರ್ವಸತಿ ಕಾರ್ಯಕರ್ತರ ಸಮಸ್ಯೆಗಳ ಶಾಶ್ವತ ಪರಿಹಾರಕ್ಕಾಗಿ ಈ ಮನವಿ ಸಲ್ಲಿಸಲಾಗಿದ್ದು, ಮುಂದಿನ ದಿನಗಳಲ್ಲೂ ವಿಕಲಚೇ ತನರ ಹಕ್ಕು ಮತ್ತು ಸಬಲೀಕರಣಕ್ಕಾಗಿ ಸಂಘಟ ನೆಯ ಹೋರಾಟ ನಿರಂತರವಾಗಿ ಮುಂದುವರಿಯ ಲಿದೆ ಎಂದು ಸಂಕಲ್ಪ ವಿಕಲಚೇತನರ ಒಕ್ಕೂಟ ತಿಳಿಸಿದೆ.

## ತಾಲೂಕು ಆಡಳಿತದಿಂದ ವಿವಿಧ ಜಯಂತಿಗಳ ಆಚರಣೆ ಕುರಿತಂತೆ ಪೂರ್ವ ಸಭೆ



ಧೈರ್ಯದ ದಾರಿ

**ಮಾನ್ವಿ,ಜ.14–** ಪಟ್ಟಣದ ತಹಸೀಲ್ದಾರ್ ಕಚೇರಿ ಯಲ್ಲಿ ವಿವಿಧ ಜಯಂತಿಗಳ ಆಚರಣೆ ಕುರಿತಂತೆ ನಡೆದ ಪೂರ್ವ ಸಭೆಯಲ್ಲಿ ಗ್ರೇಡ್–2 ತಹಸೀಲ್ದಾರ್ ಅಬ್ದುಲ್ ವಾಹಿದ್ ಮಾತನಾಡಿ ಸರ್ಕಾರವು ನಾಡಿನ ವಿವಿಧ ಮಹಾನಿಯರ ಜೀವನ ಹಾಗೂ ತತ್ವಗಳನ್ನು ತಿಳಿಸುವ ಉದ್ದೇಶದಿಂದ ತಾಲೂಕು ಆಡಳಿತ ಹಾಗೂ ಸಮುದಾಯಗಳ ಸಹಭಾಗಿತ್ವದಲ್ಲಿ ವಿವಿಧ ಮಹಾನಿಯರ ಜಯಂತಿಗಳನ್ನು ಆಚರಿಸಲಾಗುತ್ತಿದೆ. ಜ.14 ರಂದು ಶಿವಯೋಗಿ ಸಿದ್ದರಾಮೇಶ್ವರ ಜಯಂತಿ, ಜ.19ರಂದು ಮಹಾಯೋಗಿ ವೇಮನ ಜಯಂತಿ,ಜ.21 ರಂದು ಅಂಬಿಗರ ಜಯಂತಿ,ಜ.25 ರಂದು ಸವಿತಾ ಮಹಾರ್ಷಿಗಳ ಜಯಂತಿಗಳನ್ನು ತಹಸೀಲ್ದಾರ್ ಕಚೇರಿಯಲ್ಲಿ ಮಹಾನಿಯರ ಭಾವ ಚಿತ್ರಗಳಿಗೆ ಪೂಜೆ ಸಲ್ಲಿಸುವ ಮೂಲಕ ಅರ್ಥ ಪೂರ್ಣವಾಗಿ ಸಮುದಾಯಗಳ ಸಹಭಾಗಿತ್ವದಲ್ಲಿ ಆಚರಿಸಲಾಗುವುದು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮಹಾನಿಯರನ್ನು ತಾಲೂಕು ಆಡಳಿತ ವತಿಯಿಂದ ಸನ್ಮಾನಿಸಲಾಗುವುದು ,ವಿದ್ಯಾರ್ಥಿಗಳಿಗೆ ಪ್ರತಿಭಪುರಸ್ಕಾರ ನೀಡ 'ಲಾಗುವುದು. ಜ.26 ರಂದು ಗಣರಾಜ್ಯೋತ್ಸವ ದಿನಚಾರಣೆ ಅಂಗವಾಗಿ ಬೆಳಿಗ್ಗೆ ತಾಲೂಕಿನ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಸಂಘ ಸಂಸ್ಥೆಗಳ ಕಚೇರಿಗಳಲ್ಲಿ ಕಡ್ಡಾಯವಾಗಿ ದೇಶದ ಮಹಾನಾಯಕರ ಭಾವಚಿತ್ರಗಳಿಗೆ ಪೂಜೆ ಸಲ್ಲಿಸಿ. ಕಚೇರಿ ಆವರಣದಲ್ಲಿ ಧ್ವಜಸಂಹಿತೆಯಂತೆ ರಾಷ್ಟ್ರಧ್ವಜರೋಹಣ ನೆರವೇರಿಸಿ ತಾಲೂಕು ಆಡಳಿತದಿಂದ ತಹಸೀಲ್ದಾರ್ ಕಚೇರಿ ಹಾಗೂ ತಾಲೂಕು ಕ್ರೀಡಾಂಗಣದಲ್ಲಿ ನಡೆಯುವ ಗಣರಾಜ್ಯೋತ್ಸವ ದಿನಚಾರಣೆ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ತಿಳಿಸಿದರು. ಪೂರ್ವಭಾವಿ ಸಭೆಯಲ್ಲಿ ಪಿ.ಐ.ಸೋಮಶೇಖರ ಎಸ್.ಕೆಂಚರೆಡ್ಡಿ,ತಾ.ಆರೋಗ್ಯಾಧಿಕಾರಿ ಡಾ.ಶರಣಬ ಸವರಾಜು, ತಾ.ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷರಾದ ಹರಿಹರಪಾಟೀಲ್ ,ಅಖೀಲಭಾರತ ವೀರಶೈವ ಲಿಂಗಾಯತ ಮಹಾಸಾಭ ತಾಲೂಕು ಅಧ್ಯಕ್ಷರಾದ ಅರುಣಚಂದಾ, ಸವಿತಾ ಸಮಾಜದ ತಾ.ಅಧ್ಯಕ್ಷರಾದ ರಾಘವೇಂದ್ರ ಹುಂದೇಳ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ವಿವಿದ ಸಮುದಾಯಗಳ ಮುಖಂಡರು ಭಾಗವಹಿಸಿ ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು.

## ಇಲಾಖೆಯಿಂದ ದೊರೆಯುವ ಸೌಲಭ್ಯಗಳನ್ನು ಬಳಸಿಕೊಂಡು ಉತ್ತಮ ವಿದ್ಯಾಭ್ಯಾಸ ನಡೆಸಿ:ಪ್ರವೀಣಕುಮಾರ್



ಧೈರ್ಯದ ದಾರಿ

**ಮಾನ್ವಿ,ಜ.14–** ಪಟ್ಟಣದ ಪಟ್ಟಣದ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ಪದವಿ ಪೂರ್ವ ಕಾಲೇಜು ಭಾರತ ರತ್ನ ಡಾ.ಎ. ಪಿ. ಜೆ. ಅಬ್ದುಲ್ ಕಲಾಂ ಸಭಾಂಗಣದಲ್ಲಿ ನಡೆದ ಎಸ್.ಎಸ್.ಎಲ್.ಸಿ ಹಾಗೂ ದ್ವೀತಿಯ ಪಿಯುಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ ಕಾರ್ಯಕ್ರಮವನ್ನು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರವೀಣಕುಮಾರ ಉದ್ಘಾಟಿಸಿ ಮಾತನಾಡಿ ಸರ್ಕಾರ ಶಿಕ್ಷಣಕ್ಕೆ ಹೆಚ್ಚಿನ ಮಹಾತ್ವ ನೀಡುತ್ತಿದ್ದು ವಿದ್ಯಾರ್ಥಿಗಳಿಗೆ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ಪದವಿ ಪೂರ್ವ ಕಾಲೇಜಿನಲ್ಲಿ ವಸತಿಯುತವಾಗಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡುತ್ತಿದ್ದು ವಸತಿ ನಿಲಯದಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯವಿರುವ ಎಲ್ಲಾ ಸೌಲಭ್ಯಗಳನ್ನು ನೀಡಲಾಗುತ್ತಿದೆ.

ಇಲಾಖೆಯಿಂದ ದೊರೆಯುವ ಸೌಲಭ್ಯಗಳನ್ನು ಬಳಸಿಕೊಂಡು ಉತ್ತಮ ವಿದ್ಯಾಭ್ಯಾಸ ನಡೆಸುವ ಮೂಲಕ ಹೆಚ್ಚಿನ ಅಂಕಗಳನ್ನು ಪಡೆದು ವಸತಿ ನಿಲಯಕ್ಕೆ ಹಾಗೂ ತಮ್ಮ ಪಾಲಕರಿಗೆ ಗೌರವತನ್ನಿ ಹಾಗೂ ಉತ್ತಮವಾದ ಜೀವನವನ್ನು ರೂಪಿಸಿಕೊಳ್ಳಿ ಎಂದು ಕರೆ ನೀಡಿದರು.

ಹಿರಿಯ ಸಾಹಿತಿ ಹಾಗೂ ಉಪನ್ಯಾಸಕ ರಮೇಶಬಾಬು ಯಾಳಗಿ ಉಪನ್ಯಾಸ ನೀಡಿ ಎಸ್.ಎಸ್.ಎಲ್.ಸಿ ಹಾಗೂ ದ್ವೀತಿಯ ಪಿ.ಯು.ಸಿ ವಿದ್ಯಾರ್ಥಿಗಳು ಮುಂಬರುವ ವಾರ್ಷಿಕ ಪರೀಕ್ಷೆಯ ಬಗ್ಗೆ ಆತಂಕ, ಭಯಪಡದೆ ನಿಯಮಿತವಾಗಿ, ಶಿಸ್ತು ಬದ್ಧವಾಗಿ ಅಭ್ಯಾಸ ಮಾಡಿದರೆ ಖಂಡಿತವಾಗಿ ಪರೀಕ್ಷೆಯಲ್ಲಿ ಯಶಸ್ಸು ಪಡೆಯುವುದಕ್ಕೆ ಸಾಧ್ಯ ಕಠಿಣವಾದ ವಿಷಯಗಳಿಗೆ ಹೆಚ್ಚು ಸಮಯ ನಿಗದಿಪಡಿಸಿಕೊಳ್ಳಿ ಅರ್ಥವಾಗದ ಪ್ರಶ್ನೆಗಳಿಗೆ ಸಂಬಂಧಿಸಿದ ವಿಷಯದ ಶಿಕ್ಷಕರಲ್ಲಿ ಕೇಳಿ ಪರಿಹರಿಸಿಕೊಳ್ಳಿ. ಶಿಕ್ಷಣದೊಂದಿಗೆ ಸಂಸ್ಕಾರವೂ ಅಗತ್ಯವಿದೆ. ಹೆತ್ತವರನ್ನು,ಗುರು.ಹಿರಿಯರನ್ನು ಸದಾ ಗೌರವಿಸುವುದನ್ನು ಕಲಿತುಕೊಳ್ಳಿ ಎಂದು ತಿಳಿಸಿದರು.

2024–25 ನೇ ಸಾಲಿನಲ್ಲಿ ವಸತಿ ನಿಲಯದಲ್ಲಿ ಅಭ್ಯಾಸ ಮಾಡಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿ ಶಂಕರ್ ರವರನ್ನು ಸನ್ಮಾನಿಸಿ ಗೌರವಿಸಲಾಯಿತು.ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

ವಸತಿ ನಿಲಯದ ಪ್ರಾಚಾರ್ಯರಾದ ವೆಂಕಟೇಶ ನಾಯಕ , ಶಿಕ್ಷಕ ಪರುಶುರಾಮ ಯಲಗೋಡ, ಅಮರೇಶ ಸೇರಿದಂತೆ ವಸತಿ ನಿಲಯದ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದರು.

## ಬಿ.ವಿ.ಆರ್ ಇ–ಟೆಕ್ನೋ ಶಾಲೆಯಲ್ಲಿ ಸಂಕ್ರಾಂತಿ ಸಂಭ್ರಮ



ಧೈರ್ಯದ ದಾರಿ

**ಮಾನ್ವಿ,ಜ.14–** ಪಟ್ಟಣದ ಬಿ.ವಿ.ಆರ್ ಇ–ಟೆಕ್ನೋ ಶಾಲೆಯಲ್ಲಿ ನಡೆದ ಸಂಕ್ರಾಂತಿ ಸಂಭ್ರಮ ಕಾರ್ಯಕ್ರಮಕ್ಕೆ ಬಿ.ವಿ.ಆರ್ ಇ–ಟೆಕ್ನೋ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಬಿ.ವಿ.ರೆಡ್ಡಿ ಚಾಲನೆ ನೀಡಿ ಮಾತನಾಡಿ ನಮ್ಮ ದೇಶ ಹಬ್ಬಗಳ ದೇಶ ಪ್ರತಿ ಋತುವಿಗೂ ಕೂಡ ಒಂದು ಹಬ್ಬವನ್ನು ಹಿಂದೂಗಳು ಆಚರಿಸುವುದು ವಿಶೇಷವಾಗಿರುತ್ತದೆ ಶಾಲೆಯ ಮಕ್ಕಳಿಗೆ ನಮ್ಮ ಸಂಸ್ಕೃತಿ ಹಾಗೂ ಪರಂಪರೆ,ಹಬ್ಬಗಳ ಆಚರಣೆಯ ಹಿನ್ನೆಲೆ ಹಾಗೂ ಮಹಾತ್ವದ ಕುರಿತು ತಿಳಿಸುವ ಉದ್ದೇಶದಿಂದ ಶಾಲೆಯ ಮಕ್ಕಳ ಜೋತೆಯಲ್ಲಿ ಪಾಲಕರು ಒಳಗೊಂಡಂತೆ ಸಂಕ್ರಾಂತಿ ಸಂಭ್ರಮ ಕಾರ್ಯಕ್ರಮ ವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಶಾಲೆಯ ಆವರಣದಲ್ಲಿ ಗ್ರಾಮೀಣ ಭಾಗದಲ್ಲಿನ ಸಾಂಕ್ರತಿ ಹಬ್ಬದ ಆಚರಣೆಯ ಸಡಗರವನ್ನು ಬಿಂಬಿಸುವ ಹಳ್ಳಿಯ ಸೊಬಗನ್ನು ಚಿತ್ರಿಸುವ ವಿವಿಧ ರೂಪಕಗಳು ಗಮನ ಸೇಳೆದವು ಶಾಲೆಯ ವಿದ್ಯಾರ್ಥಿಗಳು ಸಾಂಕ್ರತಿಯ ಹಬ್ಬದ ದಿನ ಹಳ್ಳಿಗಳಲ್ಲಿ ಬರುವ ಗಂಗೆ ಎತ್ತು ಆಡಿಸುವ ವೇಷ, ಹರಿದಾಸರ ವೇಷ, ಕುಸ್ತಿ ಪಟುಗಳ ವೇಷ, ಕೋಳಿ ಪಂದ್ಯ, ಉಸುಕಿನ ಚೀಲವನ್ನು ಎತ್ತುವ ಸ್ಪರ್ಧಿಗಳಂತೆ ವೇಷ ಹಾಕಿಕೊಂಡು ಗಮನ ಸೇಳೆದರು. ವಿದ್ಯಾರ್ಥಿಗಳಿಂದ ಸಂಕ್ರಾಂತಿ ಹಬ್ಬದ ಹಾಡುಗಳಿಗೆ ನೃತ್ಯ ಪ್ರದರ್ಶನ ನೀಡಿದರು ಶಾಲೆಯ ಶಿಕ್ಷಕರು ಹಾಗೂ ಪಾಲಕರು ಶಾಲೆಯ ಮಕ್ಕಳಿಗೆ ಸಂಕ್ರಾತಿ ಹಬ್ಬದ ವಿಶೇಷವಾದ ಹಣೆರೆಯುವ ಮೂಲಕ ಶುಭಾಕೋರಿದರು.

ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಬಿ.ಪದ್ಮಾವತಿ, ಮುಖ್ಯಗುರು ಸರ್ ಮತ್ ಖಾನ್ , ವಿದ್ಯಾರ್ಥಿಗಳ ಪಾಲಕರಾದ ಪ್ರಿಯಾಂಕ ವೀರೇಶ, ಭಾರತಿ ಶರಣಪ್ಪ, ಕೆ .ಪೂಜಾಜಗನ್ನಾಥ, ಪೂಜಾ ವಿನೋದ,ಹಸೀನಾ ಮಹ್ಮದ್ ಬೇಗ್, ಈರಮ್ಮ ಉಮೇಶ ಕರಿ, ದೀಪಾ ವಿ. ಶ್ರೀನಿವಾಸ , ಸುನಿತಾ ಬಾಲಾಜಿ ಸಿಂಗ್, ಅಫ್ರಿನಾ ಬೇಪಾ, ಟಿ.ಕೆ. ಅನಿತಾ ರೆಡ್ಡಿ, ಟಿ.ಕೆ. ವೆಂಕಟೇಶ, ವೈಷ್ಣವಿ ವಿಜಯಕುಮಾರ , ಶರಣಮ್ಮ ಉಮಾಶಂಕರ,ಸುರೇಖಾ ಮಹೇಶ, ಶಿಕ್ಷಕಿಯರಾದ ಶಿಲ್ಪಾ, ಕೆ ಸುಧಾ, ವಿಜಯಾ , ಪೂಜಾ, ಸೌಮ್ಯಾ,ಉಷಾಶ್ರೀ ಸೇರಿದಂತೆ ಶಾಲೆಯ ವಿದ್ಯಾರ್ಥಿಗಳು ಭಾಗವಹಿಸಿದರು.

# ಸ್ವಚ್ಛತೆಯಲ್ಲಿ ಪೌರಕಾರ್ಮಿಕರ ಶ್ರಮ ಶ್ಲಾಘನೀಯ



**ಮೈಸೂರು: ಜ.14:–** ಮೈಸೂರು ನಗರ ಸ್ವಚ್ಛತೆಯಲ್ಲಿ ದೇಶದಲ್ಲೇ ಅತ್ಯುತ್ತಮ ಶ್ರೇಣಿ ಪಡೆಯುತ್ತಿರುವುದಕ್ಕೆ ಪೌರಕಾರ್ಮಿಕರ ಅಪಾರ ಶ್ರಮವೇ ಪ್ರಮುಖ ಕಾರಣ ಎಂದು ಪ್ರಾದೇಶಿಕ ಆಯುಕ್ತ ನಿತೇಶ್ ಪಾಟೀಲ್ ಶ್ಲಾಘಿಸಿದರು.

ಮಹಾನಗರ ಪಾಲಿಕೆ ವತಿಯಿಂದ ಕೇಂದ್ರ ಸರ್ಕಾರದ ಸ್ವಚ್ಛ ಭಾರತ್ ಮಿಷನ್ 2.0 ಯೋಜನೆಯ ಅಡಿಯಲ್ಲಿ ಪಾಲಿಕೆಯ ಸ್ವಚ್ಛತಾ ಸಿಬ್ಬಂದಿಗಳಿಗಾಗಿ ಒಂದು ದಿನದ ವಿಶೇಷ ಸಾಮರ್ಥ್ಯ ಅಭಿವೃದ್ಧಿ ತರಬೇತಿ ಕಾರ್ಯಕ್ರಮಕ್ಕೆ ನಗರದ ಎಸ್ಐಯುಡಿ ಆವರಣದಲ್ಲಿ ಚಾಲನೆ ನೀಡಿ ಮಾತನಾಡಿದ ಅವರು, ಪೌರಕಾರ್ಮಿಕರ ಹಿತದೃಷ್ಟಿಯಿಂದ ಅವರಿಗೆ ಕರ್ತವ್ಯದ ಸಮಯದಲ್ಲಿ ಅನುಕೂಲವಾಗುವಂತೆ ಉತ್ತಮ ಗುಣಮಟ್ಟದ ಶೂಗಳು ಮತ್ತು ಕೈಗವಸುಗಳನ್ನು ವಿತರಿಸಲು ಈಗಾಗಲೇ ಸೂಚನೆ ನೀಡಲಾಗಿದೆ. ಪ್ರತಿಯೊಬ್ಬರೂ ತಮ್ಮ ಆರೋಗ್ಯ ಕಾಪಾಡಿಕೊಳ್ಳುವ ಕಡೆಗೆ ಗಮನ ನೀಡಬೇಕು ಎಂದರು.

ಎಂಎಸ್‌ಸಿ ಸಿ.ಎನ್.ಮಂಜೇಗೌಡ ಮಾತನಾಡಿ, ತಾವು ಸೈನಿಕರಾಗಿ ಸೇವೆ ಸಲ್ಲಿಸಿದ ದಿನಗಳನ್ನು ಸ್ಮರಿಸಿಕೊಂಡು, ಪೌರಕಾರ್ಮಿಕರೂ ಸೈನಿಕರಂತೆ ಶಿಸ್ತನ್ನು ಅಳವಡಿಸಿಕೊಳ್ಳಬೇಕು. ಪೌರಕಾರ್ಮಿಕರು ತಮ್ಮ ಆರೋಗ್ಯದ ಕಡೆಗೆ ಹೆಚ್ಚಿನ ಆದ್ಯತೆ ನೀಡಬೇಕು. ತಮ್ಮ ಮಕ್ಕಳನ್ನು ಉತ್ತಮವಾಗಿ ಓದಿಸುವ ಮೂಲಕ ಅವರನ್ನು ದೇಶದ ಸತ್ಪ್ರಜೆಗಳನ್ನಾಗಿ ರೂಪಿಸಬೇಕು ಎಂದು ಕರೆ ನೀಡಿದರು.

ರಾಜ್ಯ ನಗರಾಭಿವೃದ್ಧಿ ಸಂಸ್ಥೆಯ ನಿರ್ದೇಶಕ ಅಸಾದ್ ಉರ್ ರೆಹಮಾನ್ ಶರೀಫ್ ಮಾತನಾಡಿ, ನಗರದ ಸ್ವಚ್ಛತೆಯಲ್ಲಿ ಪೌರಕಾರ್ಮಿಕರ ಪಾತ್ರ ಅತ್ಯಂತ ಮುಖ್ಯವಾಗಿದ್ದು, ಅವರ ಶ್ರಮ ಶ್ಲಾಘನೀಯವಾಗಿದೆ. ಕೆಲಸದ ಜತೆಗೆ ತಮ್ಮ ಭವಿಷ್ಯ ಮತ್ತು ಆರೋಗ್ಯದ ಬಗ್ಗೆಯೂ ಕಾಳಜಿ ವಹಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪಾಲಿಕೆ ಆರೋಗ್ಯ ಅಧಿಕಾರಿ ಡಾ.ವೆಂಕಟೇಶ್, ಪಶ್ಚಿಮ ವಿಭಾಗದ ಕಾರ್ಯಪಾಲಕ ಅಭಿಯಂತರ ಶ್ರೀನಿವಾಸ್, ವಲಯ-1ರ ವಲಯ ಆಯುಕ್ತ ರಮೇಶ್, ಪಾಲಿಕೆಯ ವಲಯ-5ರ ವಲಯ ಆಯುಕ್ತ ಮಂಜುನಾಥರೆಡ್ಡಿ, ಪಾಲಿಕೆಯ ಸಹಾಯಕ ಕಾರ್ಯಪಾಲಕ ಅಭಿಯಂತರ ಮೀನಾಕ್ಷಿ, ಭಗೀರಥ ಸಂಸ್ಥೆಯ ಸಂಸ್ಥಾಪಕರು ಹಾಗೂ ಹಿರಿಯ ಸಮಾಲೋಚಕ ಕುಲಕರ್ಣಿ, ಅಖಿಲ ಭಾರತ ಸ್ಥಳೀಯ ಸ್ವಯಂ ಸರ್ಕಾರ ಸಂಸ್ಥೆಯ ಪ್ರಾದೇಶಿಕ ನಿರ್ದೇಶಕ ಶ್ರೀಕಿರಣ್ ಹಾಗೂ ಹಿರಿಯ ಸಮಾಲೋಚಕ ಜಿತೇಂದ್ರ ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಘನತ್ಯಾಜ್ಯ ನಿರ್ವಹಣೆಯಲ್ಲಿ ಅಳವಡಿಸಿಕೊಂಡಿರುವ ಉತ್ತಮ ಪದ್ಧತಿಗಳ ಕುರಿತು ಅಧ್ಯಯನ ನಡೆಸಲು ಮತ್ತು ತರಬೇತಿ ಪಡೆಯಲು ಹುಬ್ಬಳ್ಳಿ-ಧಾರವಾಡ ಹಾಗೂ ಬಳ್ಳಾರಿ ಮಹಾನಗರ ಪಾಲಿಕೆಗಳ ಸುಮಾರು 90ಕ್ಕೂ ಹೆಚ್ಚು ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಕ್ಷೇತ್ರ ಭೇಟಿ ನೀಡಿದ್ದರು.

# ಶಾಸಕ ಯತ್ನಾಳರಿಂದ ಫಲಪುಷ್ಪ ಪ್ರದರ್ಶನ- ತೋಟಗಾರಿಕೆ ಅಭಿಯಾನ ಉದ್ಘಾಟನೆ



**ವಿಜಯಪುರ,ಜ.14:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ತೋಟಗಾರಿಕೆ ಇಲಾಖೆ, ಜಿಲ್ಲಾ ತೋಟಗಾರಿಕೆ ಸಂಘ, ಕರ್ನಾಟಕ ರಾಜ್ಯ ಲಿಂಬೆ ಅಭಿವೃದ್ಧಿ ಮಂಡಳಿ ಹಾಗೂ ಜಿಲ್ಲಾ ಹಾಪ್‌ಕಾಮ್ಸ್ ಇವರ ಸಹಯೋಗದೊಂದಿಗೆ ಜನವರಿ 13ರಿಂದ 15ರವರೆಗೆ ನಗರದ ಸ್ಟೇಶನ್ ರಸ್ತೆಯಲ್ಲಿರುವ ಬಸವವನ ಆವರಣದಲ್ಲಿ ಹಮ್ಮಿಕೊಂಡ ಫಲಪುಷ್ಪ ಪ್ರದರ್ಶನ ಹಾಗೂ ತೋಟಗಾರಿಕೆ ಅಭಿಯಾನಕ್ಕೆ ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಉದ್ಘಾಟಿಸಿ, ಎಲ್ಲ ಮಳಿಗೆಗಳನ್ನು ವೀಕ್ಷಣೆ ಮಾಡಿದರು.

ಫಲಪುಷ್ಪ ಪ್ರದರ್ಶನ ನೋಡುಗರ ಕಣ್ಮನ ಸೆಳೆಯುತ್ತಿವೆ. ವಿವಿಧ ಹೂ-ಹಣ್ಣು ಹಾಗೂ ತರಕಾರಿಗಳಿಂದ ನಿರ್ಮಿಸಲಾದ ಅಪರೂಪದ ಕಲಾಕೃತಿಗಳು ಜನಾಕರ್ಷಣೆಯವಾಗಿವೆ. ಒಂದಕ್ಕಿಂತ ಒಂದು ವಿಭಿನ್ನ ಆಲೋಚನೆ, ಸೃಜನಶೀಲತೆ ಹಾಗೂ ನೈಸರ್ಗಿಕ ಸೌಂದರ್ಯವನ್ನು ಸೃಷ್ಟಿಸುವ ಸನ್ನಿವೇಶ ಈ ಪ್ರದರ್ಶನದಲ್ಲಿ ವೀಕ್ಷಿಸಬಹುದಾಗಿದ್ದು, ಸಾರ್ವಜನಿಕರಿಂದ ಮೆಚ್ಚುಗೆ ಪಡೆಯುತ್ತಿದೆ.

ಪ್ರದರ್ಶನದಲ್ಲಿ ಹೂವಿನಲ್ಲಿ ಅರಳಿದ

ಗೋಲಗುಮ್ಮಟ, ಗಿಡದಲ್ಲಿ ಕುಳಿತ ನಾಟ್ಯ ಮಯೂರಿ, ವೃಕ್ಷಮಾತೆ ಸಾಲುಮರದ ತಿಮ್ಮಕ್ಕ, ಹೂವಿನಲ್ಲಿ ಮೂಡಿಬಂದ ಡಾಲ್ಫಿನ್, ಪುಷ್ಪ ಮಾರಾಟಕ್ಕೆ ಬಂದ ಪುಷ್ಪಲತಾ ಚಿತ್ರ, ನೀರಿನಿಂದ ಹೊರಬಂದ ಹಂಸ ಸೇರಿದಂತೆ ಮುಂತಾದ ಕಲಾಕೃತಿಗಳು ಗಮನ ಸೆಳೆಯುತ್ತಿವೆ.

ಜಿಲ್ಲೆಯ ಹೆಮ್ಮೆಯನ್ನು ಹೆಚ್ಚಿಸಿದ ಭೌಗೋಳಿಕ ಮಾನ್ಯತೆ ಪಡೆದ ಇಂಡಿ ಲಿಂಬೆ, ವಿವಿಧ ಬಗೆಯ ಹೂಗಳಿಂದ ನಿರ್ಮಾಣವಾದ ಕಲಾ ಕೃತಿಗಳು, ಆರೋಗ್ಯ ಸಂದೇಶವನ್ನು ಸಾರುವ ಹಣ್ಣುಗಳ ಕಲಾಕೃತಿ, ತರಕಾರಿಯಲ್ಲಿ ಸೃಷ್ಟಿಸಿದ ಮಹಾಪುರುಷರ ಆಕೃತಿಗಳನ್ನು ಪ್ರದರ್ಶನದಲ್ಲಿ ಕಾಣಬಹುದಾಗಿದೆ.

ಸಿಂಪಿಯಲ್ಲಿ ಅರಳಿದ ಹಣ್ಣು, ಹೂವಿನಲ್ಲಿ ಅರಳಿದ ಅಳಿಲು, ಹಸಿ ಈರುಳ್ಳಿಯಲ್ಲಿ ಉದ್ಭವಿಸಿದ ತೋಟದ ಮನೆ, ಕಲಾಕೃತಿಗಳು ಕಲಾವಿದರ ವೈವಿಧ್ಯಮಯ ಕಲ್ಪನೆಗೆ ಸಾಕ್ಷಿಕರಿಸಿವೆ. ಧಾನ್ಯಬೀಜಗಳಿಂದ ನಿರ್ಮಿಸಿದ ಕಲಾ ಕೃತಿಗಳಲ್ಲಿ ಸಿರಿಧಾನ್ಯದಲ್ಲಿ ಮೂಡಿಬಂದ ಸ್ವಾಮಿ ವಿವೇಕಾನಂದರು, ರಾಜಗಿರಿ ಬೀಜಗಳಿಂದ ಮೂಡಿಬಂದ ಜಾಂಬವಂತ ಆಕರ್ಷಣೀಯವಾಗಿವೆ.

ಕುಟುಂಬ ಸಮೇತರಾಗಿ ಪ್ರದರ್ಶನ ವೀಕ್ಷಣೆಗೆ ಬಂದವರು ಸೆಲ್ಫಿ ತೆಗೆದುಕೊಂಡು ಆನಂದಿಸಬಹುದಾಗಿದೆ. ಮನರಂಜನೆ ಮತ್ತು ನಾವಿನ್ಯತೆಯುನ್ನು ಮೇಳೈಸಿದಂತೆ ಪ್ರದರ್ಶನಕ್ಕೆ ಆಗಮಿಸಿದವರಿಗೆ ಜೋಡಿ ಸೆಲ್ಫಿ ಪಾಯಿಂಟ್, ಪಕ್ಷಿ ಸೆಲ್ಫಿ ಫಾಯಿಂಟ್‌ಗಳನ್ನು ಈ ಪ್ರದರ್ಶನದಲ್ಲಿ ರೂಪಿಸಲಾಗಿದೆ. ಒಟ್ಟಾರೆ ಈ ಪ್ರದರ್ಶನದಲ್ಲಿ ಪ್ರಕೃತಿ, ಕಲೆ, ಆರೋಗ್ಯ, ಸಾಮಾಜಿಕ ಸಂದೇಶ ಸೇರಿದಂತೆ ಎಲ್ಲವನ್ನು ಒಂದೂಗುಡಿಸಿ ವಿಜಯಪುರದ ಸಾಂಸ್ಕೃತಿಕ ವೈಭವಕ್ಕೆ ಹೊಸ ಆಯಾಮ ನೀಡಿದೆ.ಶಾಲಾ ಮಕ್ಕಳಿಗೆ ತೋಟಗಾರಿಕೆ ವಿಷಯಗಳ ಕುರಿತು ಹೆಚ್ಚಿನ ಅಧ್ಯಯನಕ್ಕಾಗಿ ಜಿಲ್ಲೆಯ ರೈತರು ಬೆಳೆದ ಎಲ್ಲ ಬಗೆಯ ಹಣ್ಣು, ತರಕಾರಿ ಹಾಗೂ ಪುಷ್ಪಗಳ ಪ್ರದರ್ಶನ ಏರ್ಪಡಿಸಲಾಗಿದೆ. ಶಾಲಾ-ಕಾಲೇಜು ವಿದ್ಯಾರ್ಥಿಗಳಿಗಾಗಿ, ನಾಗರಿಕರಿಗೆ, ಗೃಹಿಣಿಯರಿಗೆ ಬೋನ್ಸಾಯ ಗಿಡಗಳ ಬೇಸಾಯ, ಅಣಬೆ ಬೇಸಾಯ, ಕೈತೋಟ, ಸಾವಯವ ಕೃಷಿಗೆ ಉತ್ತೇಜನ ನೀಡಲು ಪ್ರದರ್ಶಿಸಲಾಗಿದೆ. ರೈತರಿಗೆ ಮಾಹಿತಿ ನೀಡಲು ತೋಟಗಾರಿಕೆ ಸೇವಾ ಕೇಂದ್ರ, ವಿವಿಧ ಯಂತ್ರೋಪಕರಣ, ಹನಿ ನೀರಾವರಿ ಉಪಕರಣಗಳು ಹಾಗೂ ಇತರ ಪರಿಕರ ಮಳಿಗೆಗಳನ್ನು ಸ್ಥಾಪಿಸಲಾಗಿದೆ.

ಜಿಲ್ಲೆಯ ತೋಟಗಾರಿಕೆ ಬೆಳೆಗಾರರಿಗೆ ದ್ರಾಕ್ಷಿ, ದಾಳಿಂಬೆ ಮತ್ತು ಡ್ರಾ ಗನ್ ಫ್ರೂಟ್ ಬೆಳೆಗಳಲ್ಲಿ ಹವಾಮಾನ ಅಧಾರಿತ ಸಮಗ್ರ ಬೇಸಾಯ ಪದ್ಧತಿ, ಜೇನು ಸಾಕಾಣಿಕೆ ತರಬೇತಿ ಹಾಗೂ ತಾಳೆ ಬೆಳೆಯಲ್ಲಿ ಸುಧಾರಿತ ಬೇಸಾಯ ಕ್ರಮಗಳ ಕುರಿತು ಈ ಪ್ರದರ್ಶನದಲ್ಲಿ ವಿಚಾರ ಸಂಕಿರಣ ಏರ್ಪಡಿಸಲಾಗಿದೆ. ಈ ಪ್ರದರ್ಶನದಲ್ಲಿ ಸಾರ್ವಜನಿಕರಿಗೆ ಅನುಕೂಲವಾಗಲೆಂದು ಸಂಕ್ರಾಂತಿ ಹಬ್ಬಕ್ಕೆ ಬೇಕಾಗುವ ಹಣ್ಣು ಹಂಪಲುಗಳನ್ನು ರೈತರಿಂದ ನೇರವಾಗಿ ಸಾರ್ವಜನಿಕರಿಗೆ ಕಲ್ಪಿಸುವ ವ್ಯವಸ್ಥೆ ಮಾಡಲಾಗಿದೆ. ಪ್ರತಿ ದಿನ ಸಂಜೆ ವಿವಿಧ ಕಲಾ ತಂಡ, ಶಾಲಾ ಕಾಲೇಜ್ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಲಾಗಿದೆ. ಪ್ರತಿ ಬೆಳಿಗ್ಗೆ 9-30 ರಿಂದ 8-30ರವರೆಗೆ ಪ್ರದರ್ಶನ ನಡೆಯಲಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಈ ಅಪರೂಪದ ಪ್ರದರ್ಶನದಲ್ಲಿ ಭಾಗವಹಿಸಿ ವೀಕ್ಷಣೆ ಮಾಡುವಂತೆ ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕ ರಾಹುಲ್ ಭಾವಿದೊಡ್ಡಿ ಮನವಿ ಮಾಡಿಕೊಂಡಿದ್ದಾರೆ.

ಉದ್ಘಾಟನಾ ಸಮಾರಂಭದಲ್ಲಿ ಕರ್ನಾಟಕ ರಾಜ್ಯ ಲಿಂಬೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಬಿ.ಎಸ್.ಕವಲಗಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಇಲಿಯಾಸ ಬೋರಾಮಣಿ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ ಸೇರಿದಂತೆ, ರೈತ ಮುಖಂಡರು, ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

# ತೊಂಡಿಹಾಳ ಹುಲಿಗೆಮ್ಮ ದೇವಿಯ ಜಾತ್ರೆ: ಮದ್ಯ ಮಾರಾಟ ಬಂದ್

**ರಾಯಚೂರು,ಜ.14–** ಜಿಲ್ಲೆಯ ಲಿಂಗಸೂಗೂರು ತಾಲ್ಲೂಕಿನ ತೊಂಡಿಹಾಳ ಗ್ರಾಮದಲ್ಲಿ ಶ್ರೀ ಹುಲಿಗೆಮ್ಮ ದೇವಿಯ ಜಾತ್ರೆಯು ಸುಗಮವಾಗಿ ನಡೆಯಲು, ಶಾಂತಿ ಮತ್ತು ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ ಹಿತದೃಷ್ಟಿಯಿಂದ ಮುಂಜಾಗ್ರತ ಕ್ರಮವಾಗಿ ದಿನಾಂಕ:15-01-2026ರ ಸಾಯಂಕಾಲ 06ಗಂಟೆಯಿಂದ ದಿನಾಂಕ:19-01-2026ರ ಬೆಳಿಗ್ಗೆ 06 ಗಂಟೆಯವರೆಗೆ ತೋಂಡಿಹಾಳ ಗ್ರಾಮದ ಸುತ್ತಮುತ್ತಲಿನ ಸುಮಾರು 10 ಕಿ.ಮೀ ವ್ಯಾಪ್ತಿಯವರೆಗೆ ಅಬಕಾರಿ ಕಾಯ್ದೆ 1965 ರ ಕಲಂ. 21 (1) ರನ್ವಯ ಎಲ್ಲಾ ರೀತಿಯ ಮದ್ಯ ತಯಾರಿಕಾ ಘಟಕಗಳು/ಸಾಗಾಣಿಕೆ/ ಮತ್ತು ಸಂಗ್ರಹಣೆಯನ್ನು/ ಮಾರಾಟ ಮಳಿಗೆಗಳನ್ನು ಬಂದ್ ಇಡುವಂತೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ನಿತೀಶ್ ಕೆ. ಅವರು ಆದೇಶ ಹೊರಡಿಸಿದ್ದಾರೆ.

# ವಿತರಣಾ ಕಾಲುವೆ ಸಂಖ್ಯೆ 102ರ ಸುತ್ತಲಿನ ಪ್ರದೇಶದಲ್ಲಿ ನಿಷೇಧಾಜ್ಞೆ ಜಾರಿ

**ರಾಯಚೂರು,ಜ.14–** ಗಣೇಕಲ್ ಜಲಾಶಯದಿಂದ ರಾಂಪೂರಿಗೆ ಕುಡಿಯುವ ನೀರನ್ನು ಹರಿಸಲು ವಿತರಣಾ ಕಾಲುವೆ ಸಂಖ್ಯೆ: 102ರ ಸುತ್ತಲಿನ ಪ್ರದೇಶದ ವ್ಯಾಪ್ತಿಯಲ್ಲಿ ಶಾಂತಿ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಹಾಗೂ ಸಾರ್ವಜನಿಕರ ಹಿತದೃಷ್ಟಿಯಿಂದ ಯಾವುದೇ ಅಹಿತಕರ ಘಟನೆಗಳು ಜರುಗದಂತೆ ದಿನಾಂಕ:13-01-2026 ರಂದು ಮಧ್ಯರಾತ್ರಿ 12 ಗಂಟೆಯಿಂದ ಅನ್ವಯವಾಗುವಂತೆ ದಿನಾಂಕ:19-01-2026 ಮಧ್ಯರಾತ್ರಿ 12 ಗಂಟೆಯವರೆಗೂ ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ 2023ರ ಕಲಂ 163 ರನ್ವಯ ಈ ಕಾಲುವೆಯ ಸುತ್ತಮುತ್ತಲಿನ ಪ್ರದೇಶದ ವ್ಯಾಪ್ತಿಯಲ್ಲಿ 100 ಮೀಟರ್ ಸುತ್ತುವರೆದ ಪ್ರದೇಶದಲ್ಲಿ ನಿಷೇಧಾಜ್ಞೆಯನ್ನು ಜಾರಿಗೊಳಿಸಿ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ನಿತೀಶ್ ಕೆ. ಅವರು ಆದೇಶ ಹೊರಡಿಸಿದ್ದಾರೆ.

# ಜನವರಿ 16ರಂದು ರಾಯಚೂರು ಉತ್ಸವದ ವಿಶೇಷ ಕಾರ್ಯಕ್ರಮ: ಸರ್ವರಿಗೂ ಆಹ್ವಾನ

**ರಾಯಚೂರು,ಜ.14–** ರಾಯಚೂರು ಜಿಲ್ಲೆಯಲ್ಲಿ ಎಡದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ 2026ರ ವೇಳಾ ಪಟ್ಟಿ, ಬ್ಯಾನರ್, ಪೋಸ್ಟರ್, ಬಲೂನ್, ಪಾಂಪ್ಲೆಂಟ್ಸ್, ಪಾಸ್, ಸಾಮಾಜಿಕ ಜಾಲತಾಣಗಳ ಬಿಡುಗಡೆ ಕಾರ್ಯಕ್ರಮವು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ಜನವರಿ 16ರ ಬೆಳಿಗ್ಗೆ 09 ಗಂಟೆಗೆ ನಗರದ ಮಹಾತ್ಮಾ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಬಿಡುಗಡೆ ಸಮಾರಂಭಕ್ಕೆ ಜಿಲ್ಲೆಯ ರೈತರು, ಸಾಹಿತಿಗಳು, ಮಾಧ್ಯಮದವರು, ಕವಿಗಳು, ಬುದ್ಧಿ ಜೀವಿಗಳು, ವಿವಿಧ ಸಂಘಟನೆ ಮುಖ್ಯಸ್ಥರು, ಪದಾಧಿಕಾರಿಗಳು, ವ್ಯಾಪಾರಸ್ಥರು, ಕಾರ್ಮಿಕರು, ವಿವಿಧ ಕ್ಷೇತ್ರಗಳ ಸಾಧಕರು/ಕಲಾವಿದರು ಹಾಗೂ ಸಾರ್ವಜನಿಕರು ಹಾಜರಾಗುವ ಜೊತೆಗೆ ಈ ಸಾಂಸ್ಕೃತಿಕ ಹಬ್ಬವು ಕೇವಲ ಒಂದು ಸರ್ಕಾರಿ ಕಾರ್ಯಕ್ರಮವಾಗದೆ ಜಿಲ್ಲೆಯ ಪ್ರತಿಯೊಬ್ಬ ನಾಗರಿಕನೂ ಹೆಮ್ಮೆಪಡುವಂತಹ ಜನೋತ್ಸವವಾಗಿ ಮೂಡಿಬರಲು ತಾವುಗಳು ಪಾಲ್ಗೊಂಡು ಈ ಮಹತ್ಕಾರ್ಯವನ್ನು

ಯಶಸ್ವಿಗೊಳಿಸುವಂತೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜನವರಿ 16ರಂದು ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

**ರಾಯಚೂರು,ಜ.14–** ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು 2026ರ ಜನವರಿ 16ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಅಂದು ಬೆಳಿಗ್ಗೆ 7.30 ಗಂಟೆಗೆ ಕಲಬುರಗಿಯಿಂದ ನಿರ್ಗಮಿಸಿ ಬೆಳಿಗ್ಗೆ 9 ಗಂಟೆಗೆ ರಾಯಚೂರು ನಗರಕ್ಕೆ ಆಗಮಿಸಿ ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತದ ಸಹಯೋಗದಲ್ಲಿ ಏರ್ಪಡಿಸಿರುವ ರಾಯಚೂರು ಉತ್ಸವದ ಕ್ಯಾಲೆಂಡರ್ ಆಫ್ ಇವೆಂಟ್ ಬಿಡುಗಡೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಬೆಳಿಗ್ಗೆ 11 ಗಂಟೆಗೆ ಪಕ್ಷದ ಕಚೇರಿಯಲ್ಲಿ ಪತ್ರಿಕಾಗೋಷ್ಠಿ ನಡೆಸುವರು. ಮಧ್ಯಾಹ್ನ 12 ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲೆಯ ಜನಪ್ರತಿನಿಧಿಗಳೊಂದಿಗೆ ರಾಯಚೂರು ಉತ್ಸವ ಕುರಿತು ಪೂರ್ವಸಿದ್ಧತಾ ಸಭೆ ನಡೆಸುವರು.

ಮಧ್ಯಾಹ್ನ 2.30ಕ್ಕೆ ರಾಯಚೂರಿನಿಂದ ನಿರ್ಗಮಿಸಿ ರಸ್ತೆ ಮಾರ್ಗವಾಗಿ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳಾದ ಕೃಷ್ಣಗೌಡ ತಾಯಣ್ಣವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಯಚೂರು ಜಿಲ್ಲಾ ಉತ್ಸವ; ಜನವರಿ 26ರಿಂದ ಹೆಲಿಕ್ಯಾಪ್ಟರ್ ರೈಡ್

**ರಾಯಚೂರು,ಜ.14–** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ರಾಯಚೂರು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ-2026ರ ಅಂಗವಾಗಿ ಜನವರಿ 26ರಿಂದ 31ರವರೆಗೆ ರಾಯಚೂರು ಜಿಲ್ಲೆಯ ನಾಗರೀಕರಿಗೆ ಬಾನಂಗಳದಿಂದ ರಾಯಚೂರು ವೀಕ್ಷಣೆಗೆ ರಾಯಚೂರು ಬೈಸ್ಕಯ್ ಎಂಬ ವಿಶೇಷ ಹೆಲಿಕ್ಯಾಪ್ಟರ್ ರೈಡ್ ಕಾರ್ಯಕ್ರಮ ಆಯೋಜಿಸಲಾಗಿದೆ.

ನಗರದ ಮಹಾತ್ಮಗಾಂಧೀ ಜಿಲ್ಲಾ ಕ್ರೀಡಾಂಗಣದ ಆವರಣದಿಂದ ಹೆಲಿಕ್ಯಾಪ್ಟರ್ ರೈಡ್‌ಗೆ ಅವಕಾಶ ಕಲ್ಪಿಸಲಾಗಿದೆ. ಈ ವಿಶೇಷ ಹೆಲಿಕ್ಯಾಪ್ಟರ್ ರೈಡ್ ಕಾರ್ಯಕ್ರಮವು ಪ್ರತಿದಿನ ಬೆಳಿಗ್ಗೆ 8 ರಿಂದ ಮಧ್ಯಾಹ್ನ 12ರವರೆಗೆ ಹಾಗೂ ಮಧ್ಯಾಹ್ನ 12.30ರಿಂದ ಸಂಜೆ 4.30ರವರೆಗೆ ನಡೆಯಲಿದ್ದು, ಪ್ರತಿಯೊಬ್ಬರಿಗೆ ಕೇವಲ 3500 ರೂ.ಗಳನ್ನು ನಿಗದಿ ಮಾಡಲಾಗಿದೆ. 2 ವರ್ಷದೊಳಗಿನ ಮಕ್ಕಳಿಗೆ ಉಚಿತ ಪ್ರವೇಶ ನೀಡಲಾಗುವುದು. ಟಿಕೇಟ್ ಮಾಹಿತಿಗಾಗಿ ಜಿಲ್ಲಾಧಿಕಾರಿಗಳ ಕಚೇರಿ ರಾಯಚೂರು ಇವರನ್ನು ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ಉತ್ಸವ ಸಮಿತಿಯ ಪ್ರಕಟಣೆ ತಿಳಿಸಿದೆ.

# ರಾಯಚೂರು ಜಿಲ್ಲೆಯಲ್ಲಿ ಬೆಂಬಲ ಬೆಲೆ ಯೋಜನೆಯಡಿ ಬಿಳಿಜೋಳ ಖರೀದಿ ಕೇಂದ್ರ ಆರಂಭ; ನೋಂದಣಿಗೆ ಅವಕಾಶ

**ರಾಯಚೂರು,ಜ.14–** 2025-26ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಬಿಳಿಜೋಳ ಖರೀದಿಗೆ ಸಂಬಂಧಿಸಿದಂತೆ ಈಗಾಗಲೇ ಖರೀದಿ ಕೇಂದ್ರಗಳನ್ನು ಗುರುತಿಸಲಾಗಿದ್ದು, ಮುಂಗಾರು ಋತುವಿನಲ್ಲಿ ಬಿಳಿಜೋಳವನ್ನು ಬೆಳೆದಿರುವ ಆಸಕ್ತ ರೈತರು ಈ ಯೋಜನೆಯಡಿ ಬೆಳೆಯನ್ನು ಸರ್ಕಾರಕ್ಕೆ ಮಾರಾಟ ಮಾಡಲು ಪ್ರತಿ ಎಕರೆಗೆ 15 ಕ್ವಿಂಟಾಲ್ ನಂತೆ ಗರಿಷ್ಠ 150 ಕ್ವಿಂಟಾಲ್ ಜೋಳವನ್ನು ಹತ್ತಿರದ ಖರೀದಿ ಕೇಂದ್ರಗಳಲ್ಲಿ ಫ್ರೂಟ್ಸ್ ಐಡಿಯೊಂದಿಗೆ ಭೇಟಿ ನೀಡಿ ನೋಂದಣಿ ಮಾಡಿಕೊಳ್ಳಬಹುದಾಗಿದೆ.

ರಾಜ್ಯದಾದ್ಯಂತ ಒಟ್ಟು 3 ಲಕ್ಷ ಮೆ.ಟನ್ ಜೋಳದ ಗುರಿಯನ್ನು ನಿಗಧಿಪಡಿಸಲಾಗಿದ್ದು, ಅದರಲ್ಲಿ ಮುಂಗಾರು ಋತುವಿನಲ್ಲಿ 0.88 ಲಕ್ಷ ಮೆಟ್ರಿಕ್ ಟನ್ & ಹಿಂಗಾರು ಋತುವಿನಲ್ಲಿ 2.12 ಲಕ್ಷ ಮೆಟ್ರಿಕ್ ಟನ್ ಜೋಳವನ್ನು ಖರೀದಿಸಲು ಮಿತಿಯನ್ನು ನಿಗಧಿಪಡಿಸಲಾಗಿದೆ.

ಅಲ್ಲದೇ ಒಬ್ಬ ರೈತನು ಯಾವುದಾದರು ಒಂದು ಋತುವಿನಲ್ಲಿ ಮಾತ್ರ ಈ ಯೋಜನೆಯಡಿ ಜೋಳವನ್ನು ನೋಂದಣಿ ಮಾಡಿಕೊಳ್ಳುವ ಅವಕಾಶವನ್ನು ಕಲ್ಪಿಸಲಾಗಿದ್ದು, ಜನವರಿ 14 ರಿಂದ ಕೇಂದ್ರಗಳಲ್ಲಿ ನೋಂದಣಿ ಪ್ರಾರಂಭಗೊಂಡಿದ್ದು, ಆಯಾ ತಾಲ್ಲೂಕಿನ ಎಲ್ಲಾ ಗ್ರಾಮಗಳ ರೈತರು ಖರೀದಿ ಕೇಂದ್ರಗಳಲ್ಲಿ ನೋಂದಣಿ ಪ್ರಕ್ರಿಯೆಲ್ಲಿ ಭಾಗಿಯಾಗುವಂತೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೈಬ್ರೀಡ್ ಬಿಳಿ ಜೋಳ ಖರೀದಿ ಪ್ರಕ್ರಿಯೆ ಆರಂಭ ಸದುಪಯೋಗಕ್ಕೆ ಜಯವಂತರಾವ್ ಪತಂಗೆ ಸಲಹೆ

**ರಾಯಚೂರು,ಜ.14–** ಜಿಲ್ಲಾಡಳಿತವು 2025-26ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಬಿಳಿಜೋಳ ಖರೀದಿಗೆ ಮುಂದಾಗಿದ್ದು, ಈ ಯೋಜನೆಯ ಸಹಾಯ ಪಡೆದುಕೊಳ್ಳಬೇಕು ಎಂದು ರಾಯಚೂರು ಒಕ್ಕಲುತನ ಹುಟ್ಟುವಳಿ ಮಾರಾಟ ಹಾಗೂ ಸಂಸ್ಕರಣ ಸಹಕಾರ ಸಂಘದ ಅಧ್ಯಕ್ಷರಾದ ಜಯವಂತರಾವ್ ಪತಂಗೆ ಅವರು ರಾಯಚೂರು ಜಿಲ್ಲೆಯ ರೈತರಲ್ಲಿ ಮನವಿ ಮಾಡಿದ್ದಾರೆ.

ಫ್ರೂಟ್ಸ್ ಐಡಿ ತಂತ್ರಾಂಶದಲ್ಲಿ ಕಡ್ಡಾಯವಾಗಿ ಬೆಳೆ ಸಮೀಕ್ಷೆ ನೋಂದಣಿಯಾದ ರೈತರಿಂದ ಪ್ರತಿ ಎಕರೆಗೆ 15 ಕ್ವಿಂಟಲ್ ರಂತೆ ಗರಿಷ್ಠ 150 ಕ್ವಿಂಟಲ್ ಹೈಬ್ರೀಡ್ ಬಿಳಿ ಜೋಳವನ್ನು ಪ್ರತಿ ಕ್ವಿಂಟಲ್‌ಗೆ 3699 ರೂ.ಗಳ ಬೆಂಬಲ ಬೆಲೆ ನಿಗದಿ ಪಡಿಸಲಾಗಿದೆ. ನೋಂದಣಿಗೆ ಬರುವ ರೈತರು ಕಡ್ಡಾಯವಾಗಿ ಫ್ರೂಟ್ಸ್ ಸಂಖ್ಯೆ (ಎಫ್ಐ.ಡಿ ಸಂಖ್ಯೆ) ಆಧಾರ್ ಕಾರ್ಡ್, ಪಹಣಿ, ನಕಲು ಪ್ರತಿ ಮತ್ತು ರೈತರ ಬೆರಳಚ್ಚು ನೀಡುವುದು ಕಡ್ಡಾಯವಾಗಿದ್ದು ರೈತರು ಮಾರ್ಗಸೂಚಿ ಪಾಲನೆ ಮಾಡಬೇಕು ಎಂದು ಅವರು ಮನವಿ ಮಾಡಿದ್ದಾರೆ.

# ಡಾ.ಬಿ.ಆರ್.ಅಂಬೇಡ್ಕರ್ ಭವನಗಳು ಜ್ಞಾನದ ಕೇಂದ್ರಗಳಾಗಬೇಕು ಶಾಸಕ ಡಿ.ರವಿಶಂಕರ್



**ಕೆ.ಆರ್.ನಗರ,ಜ.14:–** ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ರವರ ಹೆಸರಿನಲ್ಲಿ ನಿರ್ಮಾಣವಾದ ಸಮುದಾಯ ಭವನಗಳು ಜ್ಞಾನ ಸಂಪಾದನೆಯ ಕೇಂದ್ರಗಳಾಗಬೇಕು ಆಗ ಮಾತ್ರ ಸಮಾಜ ಪರಿವರ್ತನೆಯಾಗಿ ಸುಧಾರಣೆ ಆಗಲಿದೆ ಎಂದು ಶಾಸಕ ಡಿ.ರವಿಶಂಕರ್ ಹೇಳಿದರು.

ತಾಲೂಕಿನ ಹೊಸ ಅಗ್ರಹಾರ ಗ್ರಾಮದಲ್ಲಿ ಆಯೋಜಿಸಿದ್ದ ಹೋಬಳಿ ಮಟ್ಟದ ಸಂವಿಧಾನ ಶಿಲ್ಪಿಡಾ.ಬಿ.ಆರ್.ಅಂಬೇಡ್ಕರ್ ಸಮುದಾಯ ಭವನ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು. ಬಾಬಾ ಸಾಹೇಬರು ನಮ್ಮೆಲ್ಲರಿಗೂ ಮನೆ ದೇವರಿದ್ದಂತೆ. ಅವರು ರಚಿಸಿಕೊಟ್ಟ ಸಂವಿಧಾನದಿಂದ ಇಂದು ನಾವೆಲ್ಲ ಇಂತಹ ಉನ್ನತ ಸ್ಥಾನಮಾನಗಳನ್ನು ಅಲಂಕರಿಸಿದ್ದೇವೆ ಎಂದರು.
ಸಂವಿಧಾನ ರಚನಾ ಸಮಿತಿಗೆ ನೇಮಕವಾದ ಹಲವರು ಬಿಟ್ಟು ಹೋದರು. ಆದರೂ ಕೂಡ ಛಲಬಿಡದೆ ವಿಶ್ವದ ಅನೇಕ ದೇಶಗಳ ಸಂವಿಧಾನವನ್ನು ಅಧ್ಯಯನ ಮಾಡಿ. ಅನೇಕ ಧರ್ಮ, ಜಾತಿ, ಸಂಸ್ಕೃತಿ, ಇತಿಹಾಸವನ್ನು ಹೊಂದಿರುವ ನಮ್ಮ ಭಾರತ ದೇಶಕ್ಕೆ ಬಡವರು, ಶೋಷಿತರು, ಮಹಿಳೆಯರ ಪರವಾಗಿ ಸರ್ವರಿಗು ಸರ್ವಕಾಲಕ್ಕೂ ಸಲ್ಲುವ ಸಂವಿಧಾನವನ್ನು ರಚಿಸಿಕೊಟ್ಟ ಮಹಾತ್ಮ ಅಂಬೇಡ್ಕರ್ ಎಂದು ಗುಣಗಾನ ಮಾಡಿದರು.

ಬಾಬಾ ಸಾಹೇಬರ ಸಮಾನತೆಯ ತತ್ವದ ಸಂವಿಧಾನ ರಚನೆಯಿಂದ ಇಂದು ನಾವೆಲ್ಲ ನವ ಭಾರತವನ್ನು ಕಟ್ಟಲು ಸಾಧ್ಯವಾಗಿದೆ. ಇಲ್ಲವಾಗಿದ್ದರೆ ಹಿಂದೆ ಬ್ರಿಟಿಷರ ಕಾಲದಂತೆ ಗುಲಾಮಗಿರಿ ಪದ್ಧತಿ, ಜೀತ ಪದ್ಧತಿಯಿಂದ ಬದುಕಬೇಕಾಗಿತ್ತು. ಆದ್ದರಿಂದ ಪ್ರತಿಯೊಬ್ಬರೂ ತಮ್ಮ ಮಕ್ಕಳಿಗೆ ಗುಣಮಟ್ಟದ ಉನ್ನತ ಶಿಕ್ಷಣವನ್ನು ಕೊಡಿಸುವ ಮೂಲಕ ಸಮಾಜದ ಪ್ರರಿವರ್ತನೆಯಾಗಬೇಕೆಂದು ಕಿವಿ ಮಾತು ಹೇಳಿದರು.
ನಾನು ಶಾಸಕನಾಗಿ ಇಲ್ಲಿ ನಿಂತು ಮಾತನಾಡಲು ಸಂವಿಧಾನವೇ ಕಾರಣವಾಗಿದ್ದು. ನನಗೆ ಮತ ನೀಡಿದ ಎಲ್ಲಾ ಜನತೆಯನ್ನು ಒಂದೇ ಎಂದು ಭಾವಿಸಿ ಅವರ ಅಭಿವೃದ್ಧಿ ಕಾರ್ಯಗಳನ್ನು ಮಾಡುವುದು ನನ್ನ ಕರ್ತವ್ಯವಾಗಿದೆ. ಈಗ ಈ ಭವನಕ್ಕೆ 75 ಲಕ್ಷ ರೂಪಾಯಿಗಳು ಬಿಡುಗಡೆಯಾಗಿದೆ. ಇನ್ನೂ ಅಗತ್ಯವಿದ್ದಲ್ಲಿ ಹೆಚ್ಚಿನ ಅನುದಾನವನ್ನು ನೀಡಲಾಗುವುದು ಎಂದು ಹೇಳಿದರು.

ಈಗಾಗಲೇ ಪಟ್ಟಣದಲ್ಲಿ ನಿರ್ಮಾಣವಾಗುತ್ತಿರುವ ಅಂಬೇಡ್ಕರ್ ಸಮುದಾಯ ಭವನಕ್ಕೆ 1ಕೋಟಿ ರೂಪಾಯಿಗಳ ಅನುದಾನ ನೀಡಿದ್ದೇನೆ. ನಾಯಕ ಸಮುದಾಯದ ಎಲ್ಲಾ ಭವನಗಳಿಗೂ 3.70 ಕೋಟಿ ಅನುದಾನವನ್ನು ನೀಡಲಾಗಿದೆ. ಇಲ್ಲಿಯವರೆಗೆ ಕ್ಷೇತ್ರಕ್ಕೆ 600 ಕೋಟಿ ರೂಪಾಯಿಗಳಿಗು ಹೆಚ್ಚು ಅನುದಾನ ತಂದು ಕೆಲಸ ಮಾಡಿಸುತ್ತಿದ್ದೇನೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಅನುದಾನ ತಂದು ಉಳಿದ ಕಾಮಗಾರಿಗಳನ್ನು ಹಂತ ಹಂತವಾಗಿ ಪೂರ್ಣಗೊಳಿಸುವುದಲ್ಲದೆ ಶೀಘ್ರವಾಗಿ ಪಟ್ಟಣದಲ್ಲಿ ಬಾಬಾ ಸಾಹೇಬರ ನೂತನ ಪುತ್ಥಳಿಗೆ ಭೂಮಿ ಪೂಜೆ ಮಾಡಲು ಕ್ರಮ ಕೈಗೊಳ್ಳಲಾಗುವುದು ಅಲ್ಲದೆ ಕ್ಷೇತ್ರದ ಎಲ್ಲಾ ಸಮುದಾಯ ಭವನಗಳಲ್ಲಿ ಗ್ರಂಥಾಲಯಗಳನ್ನು ತೆರೆಯಲಾಗುವುದು ಎಂದು ಭರವಸೆ ನೀಡಿದರು.

ಕಾರ್ಯಕ್ರಮವನ್ನು ಕುರಿತು ಬಂತೆಜಿ, ಉರಿಲಿಂಗ ಪೆದ್ದಿ ಮಠದ ಶ್ರೀ ಜ್ಞಾನ ಪ್ರಕಾಶ ಸ್ವಾಮೀಜಿ, ಮುಖಂಡ ವೆಂಕಟೇಶ್, ಸ್ವಾಮಿ ಮಾತನಾಡಿದರು. ಈ ಸಂದರ್ಭದಲ್ಲಿ ಮುಸ್ಲಿಂ ಧರ್ಮ ಗುರುಗಳಾದ ಸೂಫಿ ಮಹಮ್ಮದ್, ತಹಸಿಲ್ದಾರ್ ಜಿ.ಸುರೇಂದ್ರಮೂರ್ತಿ, ಸಮಾಜ ಕಲ್ಯಾಣಾಧಿಕಾರಿ ಹೆಚ್.ಎಲ್.ಶಂಕರಮೂರ್ತಿ, ಜಿ.ಪಂ ಮಾಜಿ ಸದಸ್ಯ ವೆಂಕಟಸ್ವಾಮಿ, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎಂ.ಎಸ್.ಮಹದೇವ, ಕಾಂಗ್ರೆಸ್ ವಕ್ತಾರ ಸೈಯದ್ ಜಾಬೀರ್, ಮುಖಂಡರಾದ ಗಂಧನಹಳ್ಳಿ ವೆಂಕಟೇಶ್, ಕಲ್ಲಹಳ್ಳಿ ಶ್ರೀನಿವಾಸ್, ಗಂದನಳ್ಳಿ ಹೇಮಂತ್, ನಿರ್ಮಿತಿ ಕೇಂದ್ರದ ಂಇಓ ಚೇತನ್ ಕುಮಾರ್ ಸೇರಿದಂತೆ ಇನ್ನಿತರರು ಇದ್ದರು.

# ಕಾಮಗಾರಿ ಬಿಲ್ ಪಾವತಿಗೆ ಆಗ್ರಹಿಸಿ ಗುತ್ತಿಗೆದಾರರ ಪ್ರತಿಭಟನೆ



**ಅಥಣಿ : ಜ.14:**ಇಲ್ಲಿನ ಹೆಸ್ಕಾಂ ವಿಭಾಗಿಯ ಕಚೇರಿಯ ಅಧಿಕಾರಿಗಳು ಮತ್ತು ಸಿಬ್ಬಂದಿ ಸಕಾಲಕ್ಕೆ ಕರ್ತವ್ಯಕ್ಕೆ ಹಾಜರಾಗದೆ ವಿವಿಧ ವಿದ್ಯುತ್ ಕಾಮಗಾರಿಗಳನ್ನು ಕೈಗೊಂಡ ಗುತ್ತಿಗೆದಾರರಿಗೆ ಬಿಲ್ ಗಳಿಗೆ ಸಂಬಂಧಿಸಿದ ಕಡತಗಳು ವಿಲೇವಾರಿಯಾಗುತ್ತಿಲ್ಲ, ಕೂಡಲೇ ಖಾಯಂ ಅಧಿಕಾರಿಗಳನ್ನು, ಲೆಕ್ಕಾಧಿಕಾರಿಗಳನ್ನು ನೇಮಿಸಬೇಕೆಂದು ಆಗ್ರಹಿಸಿ ಕರ್ನಾಟಕ ರಾಜ್ಯ ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಮಂಗಳವಾರ ಹೆಸ್ಕಾಂ ಕಚೇರಿಯ ಮುಂದೆ ಪ್ರತಿಭಟನೆ ನಡೆಸಿದರು.
ಈ ವೇಳೆ ವಿದ್ಯುತ್ ಗುತ್ತಿಗೆದಾರರ ಸಂಘದ ಹಿರಿಯ ಸದಸ್ಯ ಭೀಮನಗೌಡ ಪಾಟೀಲ ಮಾತನಾಡಿ ಈ ಭಾಗದ ರೈತರಿಗೆ ಮತ್ತು ಸಾರ್ವಜನಿಕರಿಗೆ ಉತ್ತಮ ರೀತಿಯ ವಿದ್ಯುತ್ ಸೇವೆಗಳು ದೊರಕಲಿ ಎಂಬ ಉದ್ದೇಶದಿಂದ ಇಲ್ಲಿ ಹೆಸ್ಕಾಂ ವಿಭಾಗೀಯ ಕಚೇರಿಯನ್ನು ಆರಂಭಿಸಲಾಗಿದ್ದು, ಆದರೆ ಇಲ್ಲಿ ಅನೇಕ ವರ್ಷಗಳಿಂದ ಖಾಯಂ ಅಧಿಕಾರಿಗಳು ಇಲ್ಲದೇ ಇರುವುದರಿಂದ ಸಾರ್ವಜನಿಕರಿಗೆ ಉತ್ತಮ ಸೇವೆಗಳು ದೊರಕುತ್ತಿಲ್ಲ. ಹೆಚ್ಚುವರಿಯಾಗಿ ನೇಮಿಸಿರುವ ಅಧಿಕಾರಿಗಳು, ಸಿಬ್ಬಂದಿ ಸಕಾಲಕ್ಕೆ ಕಚೇರಿಗೆ ಬರದೇ ಇರುವುದರಿಂದ ಸಾರ್ವಜನಿಕರಿಗೆ ಮತ್ತು ರೈತ ಜನರಿಗೆ ಬಹಳಷ್ಟು ತೊಂದರೆ ಆಗುತ್ತಿದೆ. ಇದರ ಜೊತೆಗೆ ವಿವಿಧ ವಿದ್ಯುತ್ ಕಾಮಗಾರಿಗಳನ್ನು ಪೂರ್ಣಗೊಳಿಸಿ ಬಿಲ್ ಪಾವತಿಗಾಗಿ ಕಳೆದ 5 ವರ್ಷಗಳಿಂದ ಪರದಾಡುತ್ತಿರುವ ಗುತ್ತಿಗೆದಾರರ ಕಡತಗಳು ಇನ್ನೂ ವಿಲೇವಾರಿ ಆಗುತ್ತಿಲ್ಲ. ಇಲ್ಲಿನ ಕಚೇರಿಯ ಲೆಕ್ಕಾಧಿಕಾರಿಗಳು ಕರ್ತವ್ಯಕ್ಕೆ ಬರುತ್ತಿಲ್ಲ, ಅವರನ್ನ ಕೂಡಲೇ ಬೇರಡಗೆ ವರ್ಗಾಯಿಸಿ ಇಲ್ಲಿ ಖಾಯಂ ಅಧಿಕಾರಿಯನ್ನು ನೇಮಿಸಬೇಕೆಂದು ಆಗ್ರಹಿಸಿದರು.

ವಿದ್ಯುತ್ ಗುತ್ತಿಗೆದಾರರ ಸಂಘದ ಉಪಾಧ್ಯಕ್ಷ ಅನಿಲ ಒಡೆಯರ ಮಾತನಾಡಿ ಇಲ್ಲಿನ ಹೆಸ್ಕಾಂ ಕಚೇರಿಯಲ್ಲಿ ದಕ್ಷ ಮತ್ತು ಖಾಯಂ ಅಧಿಕಾರಿಗಳು ಇಲ್ಲದೇ ಇರುವುದರಿಂದ ಇಲ್ಲಿನ ಸಿಬ್ಬಂದಿಗಳು ಕೂಡ ಹಾಜರಾತಿ ಪುಸ್ತಕದಲ್ಲಿ ಸಹಿ ಮಾಡಿ ತಮ್ಮ ವೈಯಕ್ತಿಕ ಕೆಲಸಗಳಿಗೆ ಹೊರಗಡೆ ಹೋಗುತ್ತಿದ್ದಾರೆ. ಇವರಿಗೆ ಯಾರು ಹೇಳುವವರು ಕೇಳುವವರು ಇಲ್ಲದಂತಾಗಿದೆ. ಇದರಿಂದ ಸಾರ್ವಜನಿಕರಿಗೆ ವಿದ್ಯುತ್ ಸೇವೆಗಳು ಸಕಾಲಕ್ಕೆ ದೊರಕದೇ ದಿನನಿತ್ಯ ಕಚೇರಿಗೆ ಅಲೆದಾಡುತ್ತಿದ್ದಾರೆ. ವಿವಿಧ ವಿಭಾಗಗಳಲ್ಲಿ ರಾಶಿ ರಾಶಿ ಕಡತಗಳು ವಿಲೇವಾರಿಯಾಗದೆ ಬಾಕಿ ಉಳಿದುಕೊಂಡಿವೆ. ಈ ಬಗ್ಗೆ ಲಿಖಿತ ದೂರ ನೀಡಿದರೂ ಯಾವುದೇ ಪ್ರಯೋಜನ ಆಗುತ್ತಿಲ್ಲ. ನಮ್ಮ ಸಂಘದ ಗುತ್ತಿಗೆದಾರರ ಅನೇಕ ಕಡತಗಳು ಕಳೆದ ಐದು ವರ್ಷಗಳಿಂದ ವಿಳಂಬವಾಗಿವೆ. ಅವರು ವಿವಿಧಡೆ ಸಾಲ ಮಾಡಿ ಕಾಮಗಾರಿಗಳನ್ನು ಪೂರ್ಣಗೊಳಿಸಿದರೂ ಬಿಲ್ ಪಾವತಿಯಾಗದೆ ಆರ್ಥಿಕ ಸಂಕಷ್ಟವನ್ನು ಎದುರಿಸುವಂತಾಗಿದೆ. ಆದ್ದರಿಂದ ಈ ಹೋರಾಟ ಮಾಡುವುದು ನಮಗೆ ಅನಿವಾರ್ಯವಾಗಿದೆ. ರಾಜ್ಯ ಸರ್ಕಾರ ಮತ್ತು ಹೆಸ್ಕಾಂ ವ್ಯವಸ್ಥಾಪಕರು ಕೂಡಲೇ ಇಲ್ಲಿ ಅಧಿಕಾರಿಗಳನ್ನು ನೇಮಿಸಬೇಕು, ನಮ್ಮ ಕಡತಗಳನ್ನು ಬೇಗನೆ ವಿಲೇವಾರಿ ಮಾಡಬೇಕು ಎಂದು ಅಗ್ರಹಿಸಿದರು.

"ಅಧಿಕಾರಿಗಳ ಭರವಸೆ ಪ್ರತಿಭಟನೆ ತಾತ್ಕಾಲಿಕ ಅಂತ್ಯ"
ಅಥಣಿ ಹೆಸ್ಕಾಂ ಕಚೇರಿ ಆವರಣದಲ್ಲಿ ವಿದ್ಯುತ್ ಗುತ್ತಿಗೆದಾರರು ನಡೆಸುತ್ತಿದ್ದ ಹೋರಾಟ ಸ್ಥಳಕ್ಕೆ ಕಚೇರಿಗೆ ಸಹಾಯಕ ಅಭಿಯಂತರ ಎ.ಎಸ್. ಮಾಕಾಣಿ ಆಗಮಿಸಿ ಪ್ರತಿಭಟನಾಕಾರರ ಸಮಸ್ಯೆಗಳನ್ನು ಆಲಿಸಿ ಕಚೇರಿಯಲ್ಲಿ ವಿವಿಧ ಕಾಮಗಾರಿಗಳ ಬಿಲ್ ಗಳಿಗೆ ಸಂಬಂಧಿಸಿದ ಕಡತಗಳ ವಿಲೇವಾರಿಗೆ ಈಗಾಗಲೇ ನಿಯೋಜನೆಗೊಂಡಿರುವ ಲೆಕ್ಕಾಧಿಕಾರಿ ವಿಜಯಪುರ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಅವರು ಸಕಾಲಕ್ಕೆ ಆಗಮಿಸದೆ ಇರುವುದರಿಂದ ಬಹಳ ತೊಂದರೆಯಾಗುತ್ತಿದೆ. ಈ ವಿಷಯವನ್ನು ಮೇಲಾಧಿಕಾರಗಳ ಗಮನಕ್ಕೆ ತಂದು ಒಂದೆರಡು ದಿನಗಳಲ್ಲಿ ಖಾಯಂ ಲೆಕ್ಕಾಧಿಕಾರಿಯನ್ನ ನೇಮಿಸಲಾಗುವುದು, ಕಚೇರಿಯ ಎಲ್ಲ ಸಿಬ್ಬಂದಿಗಳ ಸಭೆ ನಡೆಸಿ ಕಚೇರಿ ವೇಳೆಯಲ್ಲಿ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ಸೂಚನೆ ನೀಡಲಾಗುವುದು, ಪ್ರತಿಭಟನೆಯನ್ನು ಹಿಂಪಡೆಯುವಂತೆ ಮನವಿ ಮಾಡಿದರು.
ಹೆಸ್ಕಾಂ ಇಲಾಖೆಯ ಸಹಾಯಕ ಅಭಿಯಂತರ ಎ. ಎಸ್. ಮಾಕಾಣಿ ಅವರ ಭರವಸೆಯ ಮೇರೆಗೆ ಪ್ರತಿಭಟನೆಯನ್ನು ಹಿಂಪಡೆದ ವಿದ್ಯುತ್ ಗುತ್ತಿಗೆದಾರರು ಒಂದೆರಡು ದಿನಗಳಲ್ಲಿ ಬೇರೆ ಲೆಕ್ಕಾಧಿಕಾರಿಗಳನ್ನು ನೇಮಿಸಿ ಕಡತಗಳನ್ನ ವಿಲೇವಾರಿ ಮಾಡಬೇಕು, ಮತ್ತೆ ವಿಳಂಬ ನೀತಿ ಅನುಸರಿಸಿದರೆ ಧರಣಿ ಸತ್ಯಾಗ್ರಹ ಮುಂದುವರಿಸುತ್ತೇವೆ ಎಂದು ಎಚ್ಚರಿಕೆ ನೀಡಿ ಪ್ರತಿಭಟನೆಯನ್ನು ಹಿಂಪಡೆದರು.ಈ ಸಂದರ್ಭದಲ್ಲಿ ಗಿರೀಶ್ ವಿಜಾಪುರೆ, ಪಾರಿಶ್ ನಂದಪ್ಪನವರ, ಶೌಕತ್ ಮುಕ್ಕೇರಿ, ದ್ವಾರಕೀಶ ಜಾಲಿಹಾಳ, ಸಂಗಮೇಶ ನಾರಗೊಂಡ, ಅಶೋಕ ಪೋಳ ಸೇರಿದಂತೆ ಇನ್ನಿತರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

**ಅಥಣಿ ಹೆಸ್ಕಾಂ ಕಚೇರಿಯಲ್ಲಿ ಅಧಿಕಾರಿಗಳ ಮತ್ತು ಸಿಬ್ಬಂದಿ ಕೊರತೆಯಿಂದ ಸಾರ್ವಜನಿಕರಿಗೆ ಮತ್ತು ವಿದ್ಯುತ್ ಗುತ್ತಿಗೆದಾರರಿಗೆ ಸಮಸ್ಯೆಯಾಗುತ್ತಿದೆ. ವಿದ್ಯುತ್ ಕಾಮಗಾರಿಗೆ ಸಂಬಂಧಿಸಿದ ಅನೇಕ ಕಡತಗಳು ವಿಲೇವಾರಿಯಾಗದೆ ವಿಳಂಬಗೊಂಡಿವೆ. ಕೂಡಲೇ ಇಲ್ಲಿನ ಕಚೇರಿಗೆ ಲೆಕ್ಕಾಧಿಕಾರಿಗಳನ್ನು ನೇಮಿಸಬೇಕು.**
**ಜಗದೀಶ್ ಅವಟಿ, ಅಧ್ಯಕ್ಷರು,**
**ವಿದ್ಯುತ್ ಗುತ್ತಿಗೆದಾರರ ಸಂಘ ಅಥಣಿ.**

**ವಿದ್ಯುತ್ ಗುತ್ತಿಗೆದಾರರ ಕಡತಗಳ ವಿಲೇವಾರಿಗೆ ಸಂಬಂಧಿಸಿದಂತೆ ನಿಯೋಜನೆಗೊಂಡಿರುವ ಲೆಕ್ಕಾಧಿಕಾರಿ ಕರ್ತವ್ಯಕ್ಕೆ ಗೈರಾಗುತ್ತಿರುವ ವಿಚಾರವನ್ನು ಮೇಲಾಧಿಕಾರಿಗಳ ಗಮನಕ್ಕೆ ತಂದಿದ್ದೇವೆ. ಕೂಡಲೇ ಖಾಯಂ ಲೆಕ್ಕಾಧಿಕಾರಿಯನ್ನು ಶೀಘ್ರದಲ್ಲಿಯೇ ನೇಮಿಸಿ ವಿಳಂಬವಾಗಿರುವ ಕಡತಗಳನ್ನು ವಿಲೇವಾರಿ ಮಾಡಲಾಗುವುದು. ಕೆಲವು ಅಧಿಕಾರಿಗಳು ವಿಚಾರಣೆ ನಿಮಿತ್ಯ ಹೊರಗಡೆ ಹೋಗಿರುತ್ತಾರೆ, ಇರುವ ಸಿಬ್ಬಂದಿಯಲ್ಲಿ ಹೊಂದಾಣಿಕೆ ಮಾಡಿಕೊಂಡು ಸಾರ್ವಜನಿಕರಿಗೆ ಉತ್ತಮ ಸೇವೆಗಳನ್ನು ನೀಡುತ್ತಿದ್ದೇವೆ.**
**ಜಿ. ವಿ ಸಂಪನ್ನವರ, ಪ್ರಭಾರ ಕಾರ್ಯಪಾಲಕ ಎಂಜಿನಿಯರ್ ಹೆಸ್ಕಾಂ ಅಥಣಿ.**

# ಗೋಳಸಾರದಲ್ಲಿ ಉಚಿತ ಆರೋಗ್ಯ ತಪಾಸಣೆ ಶಿಬಿರ ಯಶಸ್ವಿ



**ವಿಜಯಪುರ, ಜ. 14:** ಸದ್ಗುರು ಶ್ರೀ ಚಿನ್ಮಯಮೂರ್ತಿ ತ್ರಿಮೂರ್ತಿ ಮಹಾಶಿವಯೋಗಿಗಳ 32ನೇ ಪುಣ್ಯಾರಾಧನೆ ಮಹೋತ್ಸವದ ಅಂಗವಾಗಿ ಇಂಡಿ ತಾಲೂಕಿನ ಗೋಳಸಾರದಲ್ಲಿ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ಆಸ್ಪತ್ರೆಯ ವತಿಯಿಂದ ಪ್ರಾಥಮಿಕ ಆರೋಗ್ಯ ಕೇಂದ್ರ ಚಿಕ್ಕಬೇನೂರ ಮತ್ತು ಅಗರಖೇಡ ಸಹಯೋಗದಲ್ಲಿ ಉಚಿತ ಆರೋಗ್ಯ ತಪಾಸಣೆ ಶಿಬಿರ ಮತ್ತು ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಸೋಮವಾರ ನಡೆಯಿತು.
ಶ್ರೀ ತ್ರಿಮೂರ್ತಿ ಮಹಾಶಿವಯೋಗಿಗಳ ಭಾವಚಿತ್ರಕ್ಕೆ ಪೂಜಿಸುವ ಮತ್ತು ಸಸಿಗೆ ನೀರುಣಿಸುವ ಮೂಲಕ ಅಭಿನವ ಪುಂಡಲಿಂಗ ಶ್ರೀಗಳು ಚಾಲನೆ ನೀಡಿದರು.
ಈ ಸಂದರ್ಭದಲ್ಲಿ ಮಾತನಾಡಿದ ಶಿಬಿರದ ಸಂಚಾಲಕ ಮತ್ತು ಆಸ್ಪತ್ರೆಯ ಶಸ್ತ್ರ ಚಿಕಿತ್ಸೆ ವಿಭಾಗದ ಮುಖ್ಯಸ್ಥ ಡಾ. ಮಂಜುನಾಥ ಕೋಟೆಣ್ಣವರ, ಗೋಳಸಾರ ಮಠದ ಜನಹಿತದ ಕಾರ್ಯಗಳು ಅನನ್ಯ. ಪ್ರತಿ ವರ್ಷ ಸದ್ಗುರು ಶ್ರೀ ಪುಂಡಲಿಂಗೇಶ್ವರ ಮತ್ತು ಶ್ರೀ ತ್ರಿಮೂರ್ತಿ ಮಹಾಶಿವಯೋಗಿಗಳ ಪುಣ್ಯಾರಾಧನೆ ಮಹೋತ್ಸವದ ಅಂಗವಾಗಿ ವರ್ಷದಲ್ಲಿ ಎರಡು ಸಲ ಬಿ.ಎಲ್.ಡಿ.ಇ ಆಸ್ಪತ್ರೆ ವತಿಯಿಂದ ಉಚಿತ ಆರೋಗ್ಯ ಶಿಬಿರ ನಡೆಸಲು ಅವಕಾಶ ನೀಡುತ್ತಾರೆ. ಭಕ್ತರ ಆರೋಗ್ಯ ಕಾಪಾಡುತ್ತಿರುವ ಅಭಿನವ ಪುಂಡಲಿಂಗ ಶ್ರೀಗಳ ಕಾರ್ಯ ಸ್ಮರಣೀಯವಾಗಿದೆ. ಜನಸಾಮಾನ್ಯರು ಸ್ವಚ್ಛ ಪರಿಸರ, ಸಾತ್ವಿಕ ಆಹಾರ, ನಿಯಮಿತ ವ್ಯಾಯಾಮ, ಅಧ್ಯಾತ್ಮ, ಸಕಾರಾತ್ಮಕ ಚಿಂತನೆ ಮತ್ತು ದುಶ್ಚಟಗಳಿಂದ ದೂರವಿರುವ ಮೂಲಕ ರೋಗ ಬರದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಅವರು ಹೇಳಿದರು.
ಬಿ.ಎಲ್.ಡಿ.ಇ ಆಸ್ಪತ್ರೆಯಲ್ಲಿ ಹೃದಯ, ಲಿವರ್, ಕಿಡ್ನಿ, ಮೆದುಳು ಸೇರಿದಂತೆ ಎಲ್ಲ ಅತ್ಯಾಧುನಿಕ, ಸಾಮಾನ್ಯ ಮತ್ತು ಸೂಪರ್ ಸ್ಪೆಷಾಲಿಟಿ ವಿಶ್ವ ದರ್ಜೆಯ ಆರೋಗ್ಯ ಸೇವೆಗಳು ಉಚಿತ ಅಥವಾ ಅತೀ ಕಡಿಮೆ ದರದಲ್ಲಿ ಲಭ್ಯವಿದ್ದು ವಿಜಯಪುರ ಮತ್ತು ನೆರೆಯ ಜಿಲ್ಲೆಗಳ ಜನರು ಇದರ ಸದುಪಯೋಗವನ್ನು ಪಡೆಯಲು ಕೋರಿದರು. 18 ವರ್ಷ ವಯಸ್ಸಿನ ಮೇಲ್ಪಟ್ಟ ಎಲ್ಲ ಆರೋಗ್ಯವಂತ ಯುವಕ ಯುವತಿಯರು ವರ್ಷಕ್ಕೆ ಮೂರು ಬಾರಿ ರಕ್ತದಾನ ಮಾಡಬಹುದು. ಇದರಿಂದ ಹೊಸ ರಕ್ತ ಉತ್ಪತ್ತಿಯಾಗಿ ಹೊಸ ಚೈತನ್ಯಯುತ ಜೀವನ ಸಾಗಿಸಬಹುದು. ಈ ನಿಟ್ಟಿನಲ್ಲಿ ಚಿಕ್ಕಬೇನೂರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಪ್ರಶಾಂತ ಧೂಮಗೊಂಡ ಎಲ್ಲರಿಗೂ ಮಾದರಿಯಾಗಿದ್ದಾರೆ ಎಂದು ಅವರು ಹೇಳಿದರು.
ಈ ಸಂದರ್ಭದಲ್ಲಿ ರೋಡಗಿಯ ಶಿವಲಿಂಗೇಶ್ವರ ಶ್ರೀಗಳು, ಯಂಕಂಚಿಯ ಮಲ್ಲಿಕಾರ್ಜುನ ಶ್ರೀಗಳು, ತಾಲೂಕಾ ಆರೋಗ್ಯಾಧಿಕಾರಿ ಡಾ. ರಾಜೇಶ ಕೋಳೆಕರ, ಡಾ. ಜಾಧವ, ಡಾ. ಚೈತ್ರಾ, ರವಿ ವಂದಾಲ ಉಪಸ್ಥಿತರಿದ್ದರು.
ಈ ಶಿಬಿರದಲ್ಲಿ ತಜ್ಞ ವೈದ್ಯರಾದ ಡಾ.ಹರೀಶ ಸುನಗದ, ಡಾ.ಸುಮಾ, ಡಾ.ಗೌರವ, ಸಹಾಯಕ ಸಿಬ್ಬಂದಿಗಳಾದ ಲಕ್ಷ್ಮೀ, ಮಂಜುನಾಥ, ದೀಪಕ, ಆತನೂರ, ಅಂಕಲಗಿ, ಗೋಟ್ಯಾಳ, ವೈ ಎಂ ಪೂಜಾರಿ ಸುಮಾರು 300 ಕ್ಕೂ ಹೆಚ್ಚು ಜನರ ಆರೋಗ್ಯ ತಪಾಸಣೆ ನಡೆಸಿದರು. ಅಲ್ಲದೇ, 75 ಜನರಿಗೆ ನೇತ್ರ ಮತ್ತು ಇತರೆ ಶಸ್ತ್ರಚಿಕಿತ್ಸೆ ಅವಶ್ಯವಿರುವ ಜನರಿಗೆ ಹೆಚ್ಚಿನ ಚಿಕಿತ್ಸೆಗಾಗಿ ಬಿ.ಎಲ್.ಡಿ.ಇ ಆಸ್ಪತ್ರೆಗೆ ಶಿಫಾರಸು ಮಾಡಲಾಯಿತು.
ಇದೇ ವೇಳೆ 10 ಜನರು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿದರು.

# ಮೋಟಗಿ ತೋಟ ಶಾಲೆಯ ಎಸ್‌ಡಿಎಂಸಿ ರಚನೆ: ವಿರೇಶ ಶೇಡಬಾಳ ಅಧ್ಯಕ್ಷ ಸುಮಿತ್ರಾ ಜೋಗಾಣಿ ಉಪಾಧ್ಯಕ್ಷೆ



**ಅಥಣಿ :ಜ.14:** ಇಲ್ಲಿನ ನಮ್ಮೂರ ಸರ್ಕಾರಿ ಹಿರಿಯ ಕನ್ನಡ ಪ್ರಾಥಮಿಕ ಶಾಲೆ ಮೋಟಗಿ ತೋಟ ಶಿವಯೋಗಿ ನಗರ.ಇದರ ನೂತನ ಶಾಲಾ ಅಭಿವೃದ್ಧಿ ಹಾಗೂ ಮೇಲುಸ್ತುವಾರಿ ಸಮಿತಿ (ಎಸ್‌ಡಿಎಂಸಿ)ಯನ್ನು ಮಂಗಳವಾರ ರಚಿಸಲಾಯಿತು.
ಅಥಣಿ ಗ್ರಾಮೀಣ ಗ್ರಾಮ ಪಂಚಾಯಿತಿ (ಸಂಕ್ನೋನಟ್ಟಿ) ಅಧ್ಯಕ್ಷ ಶಂಕರ ಗಡದೆ ಅವರ ಅಧ್ಯಕ್ಷತೆಯಲ್ಲಿ, ಪಾಲಕರು ಹಾಗೂ ಪೋಷಕರ ಸಮ್ಮುಖದಲ್ಲಿ ನಡೆದ ಸಭೆಯಲ್ಲಿ ಅಧ್ಯಕ್ಷರಾಗಿ ವಿರೇಶ ಶೇಡಬಾಳ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.
ಉಪಾಧ್ಯಕ್ಷ ಸ್ಥಾನಕ್ಕೆ ತೀವ್ರ ಪೈಪೋಟಿ ಏರ್ಪಟ್ಟಿತ್ತು. ಐದು ಜನ ಆಕಾಂಕ್ಷಿಗಳು ತಮ್ಮ ಹೆಸರನ್ನು ಸೂಚಿಸಿದ್ದರು ಕೊನೆಯ ಗಳಿಗೆಯಲ್ಲಿ ಚುನಾವಣೆ ನಡೆದು ಸುಮಿತ್ರಾ ಜೋಗಾಣಿ ಉಪಾಧ್ಯಕ್ಷರಾಗಿ ಆಯ್ಕಯಾದರು.
ಎಸ್‌ಡಿಎಂಸಿ ಸದಸ್ಯರಾಗಿ ಮಂಜು ಮಾಳಿ. ಲೋಕೇಶ್ ಸಿಂದೂರ್. ಇರ್ಫಾನ್ ಮುಲ್ಲಾ. ಮುರುಗೇಶ್ ದರೂರ. ಆಸೀಫ್ ಹುದ್ದಾರ್. ಸಂದೀಪ ಜೋಗಾಣಿ. ಸಂಜು ಕೋರಿ. ಅರುಣ್ ಕೋರಿ. ಯಾಸ್ಮೀನ್ ಮುಲ್ಲಾ. ಲಕ್ಷ್ಮಿ ರಾಠೋಡ. ಸಾವಿತ್ರಿ ಬಡಚಿ. ವಾಣಿಶ್ರೀ ಲಗಳಿ. ಪುನೀತಾ ಕುಟಕೋಳಿ. ಗೀತಾ ಉಪ್ಪಾರ. ಆಯ್ಕೆಯಾಗಿದ್ದಾರೆ.
ಶಿಕ್ಷಣ ಇಲಾಖೆಯ ಎಸ್ ಬಿ ಕರೋಸಿ. ಅಥಣಿ ಗ್ರಾಮೀಣ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ರಾಜು ಕರಾಂಡೆ ಎಸ್‌ಡಿಎಂಸಿ ರಚನೆ ಪ್ರಕ್ರಿಯೆಯಲ್ಲಿ ಉಪಸ್ಥಿತರಿದ್ದರು.
ಈ ಸಂದರ್ಭದಲ್ಲಿ ನೂತನ ಎಸ್‌ಡಿಎಂಸಿ ಅಧ್ಯಕ್ಷರಾಗಿ ಆಯ್ಕೆಯಾದ ವಿರೇಶ ಶೇಡಬಾಳ ಮಾತನಾಡಿ ಶಾಲೆಯ ಸರ್ವಾಂಗೀಣ ಅಭಿವೃದ್ಧಿಗೆ ಹಗಲಿರುಳು ಶ್ರಮಿಸುತ್ತೇನೆ. ಶಾಲಾಭಿವೃದ್ಧಿ ಸಮಿತಿಯೊಂದಿಗೆ ಸಾರ್ವಜನಿಕರು ಸಹಕರಿಸಬೇಕು. ಉತ್ತಮ ಯೋಜನೆಗಳನ್ನು ರೂಪಿಸಿ ಶಾಲೆಯನ್ನು ಅತ್ಯುತ್ತಮವಾಗಿ ಮುನ್ನಡೆಸಲಾಗುವುದು. ಶಾಲೆಯ ಶಿಕ್ಷಕರೊಂದಿಗೆ ಸಹಕರಿಸಿ ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ನೀಡಿ ಅವರ ಭವಿಷ್ಯವನ್ನು ರೂಪಿಸುವ ಕೆಲಸ ಮಾಡುತ್ತೇನೆ ಹಾಗೂ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಸರ್ಕಾರ ಜಾರಿಗೆ ತಂದಿರುವ ಯೋಜನೆಗಳ ಕುರಿತು ಪೋಷಕರಿಗೆ ಅರಿವು ಮೂಡಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯ ಕೆ ಎಸ್ ಹಾಲಳ್ಳಿ. ಸೇರಿದಂತೆ ಶಾಲೆಯ ಶಿಕ್ಷಕ. ಶಿಕ್ಷಕಿಯರು. ಸಿಬ್ಬಂದಿ ವರ್ಗದವರು. ಪಾಲಕ ಪೋಷಕರು ಉಪಸ್ಥಿತರಿದ್ದರು.

# ರಾಜ್ಯ ಸರ್ಕಾರದ ತಾರತಮ್ಯ ನೀತಿ ಬಗ್ಗೆ ಬೇಸರವಿದೆ: ಮಂಜು



**ಕೆ.ಆರ್.ಪೇಟೆ.ಜ.14:** ನಾನು ಜೆಡಿಎಸ್ ಪಕ್ಷದ ಶಾಸಕ ಎನ್ನುವ ಏಕೈಕ ಕಾರಣದಿಂದ ನನ್ನನ್ನು ಹೊರಗಿಟ್ಟು ಜಿಲ್ಲೆಯ ಇತರ 06 ವಿಧಾನ ಸಭಾ ಕ್ಷೇತ್ರಗಳ ಅಭಿವೃದ್ದಿಯ ಬಗ್ಗೆ ಆರು ಜನ ಶಾಸಕರ ಸಭೆ ನಡೆಸಲಾಗಿದೆ. ರಾಜ್ಯ ಸರ್ಕಾರದ ತಾರತಮ್ಯ ನೀತಿಯ ಬಗ್ಗೆ ನನಗೆ ಅತೀವ ಬೇಸರವಿದೆ. ಸರ್ಕಾರದ ತಾರತಮ್ಯ ನೀತಿಯನ್ನು ತಾಲೂಕಿನಾದ್ಯಂತ ನಡೆಯುತ್ತಿರುವ ಸಭೆ ಸಮಾರಂಭಗಳಲ್ಲಿ ಕ್ಷೇತ್ರದ ಜನರ ಮುಂದಿಟ್ಟು ಖಂಡಿಸುತ್ತಿದ್ದೇನೆ ಎಂದು ಶಾಸಕ ಹೆಚ್.ಟಿ.ಮಂಜು ಹೇಳಿದರು.

ಅವರು ತಾಲೂಕಿನ ಸೊಳ್ಳೇಪುರ, ಶ್ರವಣಹಳ್ಳಿ, ಚಿಕ್ಕಮಂದಗೆರೆ, ಗದ್ದೆಹೊಸೂರು, ಆಲೇನಹಳ್ಳಿ, ಮೂಡನಹಳ್ಳಿ, ಬೀರುವಳ್ಳಿ ಮತ್ತು ಸಾಕ್ಷೀಬೀಡು ಗ್ರಾಮಗಳಲ್ಲಿ ಗ್ರಾಮೀಣ ರಸ್ತೆ ಅಭಿವೃದ್ದಿ ಕಾಮಗಾರಿಗಳ ಗುದ್ದಲಿಪೂಜೆ ಕಾರ್ಯ ನೆರವೇರಿಸಿ ಮಾತನಾಡಿದರು.ತಾಲೂಕಿನ ಸೊಳ್ಳೇಪುರ ಗ್ರಾಮದಲ್ಲಿ ರಸ್ತೆ ಅಭಿವೃದ್ದಿ ಕಾಮಗಾರಿಯ ಜೊತೆಗೆ ಸಹಕಾರ ಸಂಘದ ಶುದ್ದ ಕುಡಿಯುವ ನೀರು ಘಟಕ ಉದ್ಘಾಟನೆ ಮತ್ತು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅನಂತರ ಬಹಿರಂಗ ಸಭೆಯಲ್ಲಿ ಮಾತನಾಡಿದ ಶಾಸಕರು ಗ್ರಾಮೀಣರ ಸಮಸ್ಯೆಗಳನ್ನು ಆಲಿಸಿದರು.

ಸರ್ಕರದ ತಾರತಮ್ಯ ನೀತಿಯಿಂದ ಕ್ಷೇತ್ರದ ಅಭಿವೃದ್ದಿಗೆ ಹಿನ್ನಡೆಯಾಗುತ್ತಿದೆ. ಕ್ಷೇತ್ರಾಭಿವೃದ್ದಿಗಾಗಿ ಕಾಂಗ್ರೆಸ್ ಪಕ್ಷದ ಶಾಸಕರಿಗೆ ತಲಾ 50 ಕೋಟಿ ಅನುದಾನ ನೀಡಿದ ರಾಜ್ಯ ಸರ್ಕಾರ ವಿರೋಧ ಪಕ್ಷದ ಶಾಸಕರಿಗೆ 25 ಕೋಟಿ ನೀಡಿದೆ. ಕ್ಷೇತ್ರದಲ್ಲಿ ಗ್ರಾಮೀಣ ರಸ್ತೆಗಳು ಸೇರಿದಂತೆ ಬಹುತೇಕ ರಸ್ತೆಗಳು ಹಾಳಾಗಿವೆ. 2022 ರ ಅತಿವೃಷ್ಠಿಯಿಂದ ಒಡೆದು ಹೋಗಿರುವ ತಾಲೂಕಿನ ಕೆರೆಕಟ್ಟೆಗಳ ಪುನರ್ ನಿರ್ಮಾಣ ಇದುವರೆಗೂ ಆಗಿಲ್ಲ. ಒಡೆದು ಹೋಗಿರುವ ಕೆರೆಗಳಲ್ಲಿ ನೀರಿಲ್ಲದೆ ತಾಲೂಕಿನ ಕೆರೆ ಬಯಲಿನ ರೈತ ಸಮುದಾಯ ಸಂಕಷ್ಟಕ್ಕೀಡಾಗಿದೆ. ಕೆರೆಗಳ ಪುನರ್ ನಿರ್ಮಾಣದ ಬಗ್ಗೆ ನಾನು ಸದನದಲ್ಲಿ ಧ್ವನಿಯೆತ್ತಿದ್ದರೂ ಅದರಿಂದ ಯಾವುದೇ ಪ್ರಯೋಜನವಾಗಿಲ್ಲ. ಗ್ಯಾರಂಟಿ ಯೋಜನೆಗಳನ್ನೆ ತನ್ನ ಸಾಧನೆ ಎಂದು ಬಿಂಬಿಸಿಕೊಳ್ಳುತ್ತಿರುವ ರಾಜ್ಯ ಸರ್ಕಾರಕ್ಕೆ ಗ್ರಾಮೀಣರ ಸಮಸ್ಯೆಗಳ ಪರಿಹಾರಕ್ಕೆ ಮುಂದಾಗುವ ಮನಸ್ಸಿಲ್ಲ ಎಂದು ಟೀಕಿಸಿದ ಶಾಸಕರು ಈ ಹಿಂದಿನ ಬಿಜೆಪಿ ಸರ್ಕಾರದಲ್ಲಿ ತಾಲೂಕಿನ ಹಾಳಾಗಿರುವ ಕೆರೆಗಳ ಪುನರ್ ನಿರ್ಮಾಣಕ್ಕೆ 32 ಕೋಟಿ ಅನುದಾನ ಬಿಡುಗಡೆಯಾಗಿತ್ತು. ಈಗಿನ ರಾಜ್ಯ ಸರ್ಕಾರ ಬಿಡುಗಡೆಯಾಗಿದ್ದ ಅನುದಾನವನ್ನೂ ಹಿಂದೆ ಪಡೆದು ತಾಲೂಕಿನ ರೈತರಿಗೆ ಅನ್ಯಾಯ ಮಾಡಿದೆ ಎಂದು ಕಿಡಿಕಾರಿದರು.

ರಾಜ್ಯ ಸರ್ಕಾರದ ತಾರತಮ್ಯ ನೀತಿಯಿಂದ ನಾನು ಎದೆಗುಂದಿಲ್ಲ. ಕ್ಷೇತ್ರದ ಜನರಿಗೆ ಸರ್ಕಾರದ ತಾರತಮ್ಯ ನೀತಿಯ ಅರಿವಿದೆ. ಕ್ಷೇತ್ರ ಜೆಡಿಎಸ್ ಪಕ್ಷದ ಭದ್ರಕೋಟೆಯಾಗಿದ್ದು ಜನರ ಪ್ರೀತಿಯೇ ನನಗೆ ಶ್ರೀರಕ್ಷೆಯಾಗಿದೆ. ಕೇಂದ್ರ ಸಚಿವರಾದ ಹೆಚ್.ಡಿ.ಕುಮಾರಣ್ಣ ಅವರು ಸಿ.ಎಸ್.ಆರ್ ಫಂಡ್ ಮೂಲಕ ರಸ್ತೆಗಳ ಅಭಿವೃದ್ದಿಗೆ ಅಗತ್ಯವಾದ ಅನುದಾನ ನೀಡುವುದಾಗಿ ತಿಳಿಸಿದ್ದಾರೆ. ಸೊಳ್ಳೇಪುರ ಗ್ರಾಮದ ಸಮುದಾಯ ಭವನ ನಿರ್ಮಾಣ ಕಾಮಗಾರಿ ಅರ್ಧಕ್ಕೆ ಸ್ಥಗಿತಗೊಂಡಿದೆ. ಕೆರೆ ಏರಿ ರಸ್ತೆ ಅಭಿವೃದ್ದಿ ಮತ್ತು ಮಾದಿಹಳ್ಳಿ ಸೇತುವೆ ಕಾಮಗಾರಿ ಆಗಬೇಕಾಗಿದೆ. ಸೊಳ್ಳೇಪುರ ಗ್ರಾಮಕ್ಕೆ ಆಯುಷ್ಮಾನ್ ಆಸ್ಪತ್ರೆ ಮಂಜೂರಾಗಿದ್ದು ಗ್ರಾಮದಲ್ಲಿ ಸೂಕ್ತ ಜಾಗ ನೀಡಿದರೆ ಆಸ್ಪತ್ರೆ ಕಟ್ಟಡ ಆರಂಭವಾಗಲಿದೆ.

ಗ್ರಾಮದಲ್ಲಿರುವ ಶತಮಾನದ ಸರ್ಕಾರಿ ಪ್ರಾಥಮಿಕ ಶಾಲಾ ಕಟ್ಟಡ ಶಿಥಿಲವಾಗಿದ್ದು ಸದ್ಯಕ್ಕೆ ಎರಡು ಕೊಠಡಿಗಳ ನಿರ್ಮಾಣಕ್ಕೆ 4 ಲಕ್ಷ ರೂ ಅನುದಾನ ನೀಡುವುದಾಗಿ ತಿಳಿಸಿದ ಶಾಸಕರು ರಾಜ್ಯ ಸರ್ಕಾರ ಗ್ರಾಮೀಣ ಪ್ರದೇಶದ ಶಾಲೆಗಳ ಉಳಿವಿಗೆ ಕ್ರಮ ವಹಿಸಬೇಕು. ರಾಜ್ಯದಾದ್ಯಂತ ಸರ್ಕಾರಿ ಶಾಲೆಗಳಿಗೆ ಸುಸಜ್ಜಿತ ಕಟ್ಟಡ, ಆಟದ ಮೈದಾನ ಮತ್ತು ಗುಣಮಟ್ಟದ ಶಿಕ್ಷಕರ ನೇಮಕಾತಿ ಮಾಡಿದರೆ ಸಾಕು ನಾಡಿನ ಎಲ್ಲಾ ಸರ್ಕಾರಿ ಶಾಲೆಗಳು ಉಳಿದು ಬೆಳೆಯಲಿವೆ. ಈ ಬಗ್ಗೆ ನಾಡಿನ ಶಿಕ್ಷಣ ತಜ್ಞರು ಸರ್ಕಾರದ ಮೇಲೆ ಅಗತ್ಯ ಒತ್ತಡ ಹಾಕುವಂತೆ ಶಾಸಕ ಹೆಚ್.ಟಿ.ಮಂಜು ಮನವಿ ಮಾಡಿದರು.

ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಬಾಲಕೃಷ್ಣ, ರಾಜ್ಯ ಜೆಡಿಎಸ್ ವಕ್ತಾರ ಗದ್ದೆಹೊಸೂರು ಅಶ್ವಿನ್ ಕುಮಾರ್, ದಿಶಾ ಸಮಿತಿಯ ಸದಸ್ಯ ನರಸನಾಯಕ್, ಮುಖಂಡರಾದ ರಾಮಕೃಷ್ಣೇಗೌಡ, ಕಿಕ್ಕೇರಿ ಶೇಖರ್ ಸೇರಿದಂತೆ ಹಲವರಿದ್ದರು.

# ವಾಹನ ಮಾಲೀಕರು ಮಧ್ಯವರ್ತಿಗಳನ್ನು ಸಂಪರ್ಕಿಸಬೇಡಿ



**ಮೈಸೂರು: ಜ.14:–** ವಾಹನದ ಮಾಲೀಕರು ಪ್ರಾದೇಶಿಕ ಸಾರಿಗೆ ಇಲಾಖೆಯಲ್ಲಿ ನೀಡುವ ಸೇವೆಗಳಿಗಾಗಿ ಮಧ್ಯವರ್ತಿಗಳನ್ನು ಸಂಪರ್ಕಿಸದೆ ಆನ್ ಲೈನ್ ಮೂಲಕ ಮನೆಯಲ್ಲಿ ಕುಳಿತು ಅರ್ಜಿಗಳನ್ನು ಸಲ್ಲಿಸಿ ನೇರವಾಗಿ ಸೇವೆಗಳನ್ನು ಪಡೆಯಬಹುದು ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿ ವಸಂತ್ ಈಶ್ವರ್ ಚವ್ಹಾಣ್ ಹೇಳಿದರು.

ಮೈಸೂರು ಪಶ್ಚಿಮ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ತಮ್ಮ ಕಚೇರಿಯ ಕಾರ್ಯನಿರ್ವಹಣೆಯ ಬಗ್ಗೆ ಮಾಹಿತಿ ನೀಡಲು, ಮಂಗಳವಾರ ಪಶ್ಚಿಮ ಪ್ರಾದೇಶಿಕ ಸಾರಿಗೆ ಕಚೇರಿಯಲ್ಲಿ ಇಲಾಖೆಯ ಆನ್ ಲೈನ್ ಸೇವೆಯ ಬಗ್ಗೆ ಮಾಹಿತಿ ನೀಡಿದರು.

ಪ್ರತಿ ವರ್ಷದಂತೆ ಈ ವರ್ಷವು ಜನವರಿ ತಿಂಗಳನ್ನು ರಸ್ತೆ ಸುರಕ್ಷತಾ ಮಾಸಚರಣೆ ಆಚರಣೆ ಆಗಿ ಅಚರಿಸಲಾಗುತ್ತಿದೆ. ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳು ಹಾಗೂ ಯುವ ಜನರಿಗೆ ಅತಿವೇಗದ ವಾಹನ ಚಾಲನೆ, ವೀಲಿಂಗ್, ಡ್ರಿಂಕ್ ಅಂಡ್ ಡ್ರೈವ್ ಗಳ ದುಷ್ಪರಿಣಾಮಗಳು ಹಾಗೂ ಕಾನೂನಿನ ಮೂಲಕ ವಿಧಿಸಬಹುದಾದ ಶಿಕ್ಷೆಗಳ ಬಗ್ಗೆ ಜಾಗೃತಿ ಮೂಡಿಸಲಾಗುವುದು ಎಂದರು.

ಕರ್ನಾಟಕ ರಾಜ್ಯದಲ್ಲಿ ರಸ್ತೆ ಅಪಘಾತದಿಂದ ಕಳೆದ ವರ್ಷ 28 ಸಾವಿರ ಸಾವು ನೋವುಗಳು ಉಂಟಾಗಿವೆ. ಸಂಚಾರಿ ನಿಯಮ ಪಾಲನೆ ಮಾಡಿದರೆ ಬಹಳಷ್ಟು ಸಾವು ನೋವನ್ನು ತಡೆಗಟ್ಟಬಹುದು ಎಂದರು.

ಪ್ರಾದೇಶಿಕ ಸಾರಿಗೆ ಇಲಾಖೆ ವತಿಯಿಂದ ಡಿ.ಎಲ್ ಹಾಗೂ ಎಲ್ಎಲ್ಆರ್ ಸೇರಿದಂತೆ 26ಕ್ಕೂ ಹೆಚ್ಚಿನ ಸೇವೆಯನ್ನು ಆನ್ ಲೈನ್ ಮೂಲಕ ನೀಡಲಾಗುತ್ತಿದೆ. ವಾಹನ ತಂತ್ರಾಂಶಕ್ಕೆ ಸೇವೆಗಳಾದ ಮಾಲೀಕತ್ವ ವರ್ಗಾವಣೆ, ವಿಳಾಸ ಬದಲಾವಣೆ, ತೆರಿಗೆ ಪಾವತಿ, ಕರಾರು ಒಪ್ಪಂದ ಹಾಗೂ ರದ್ದತಿ, ತೆರಿಗೆ ತೀರುವಳಿ ಪತ್ರ ನೀಡಿಕೆ. ನಕಲು ನೋಂದಣಿ ಪತ್ರ, ನೋಂದಣಿ ಪತ್ರ ನವೀಕರಣಗಳಂತ ವಿವಿಧ ಸೇವೆಗಳನ್ನು ಆನ್‌ಲೈನ್‌ಗೊಳಿಸಲಾಗಿದೆ ಎಂದು ತಿಳಿಸಿದರು. ವಾಹನದ ಮಾಲೀಕರು ಇಲಾಖೆಯಲ್ಲಿ ನೀಡುವ ಸೇವೆಗಳಿಗೆ ಸಂಬಂಧಿಸಿದಂತೆ ಆರಂಭದಲ್ಲಿ ತಮ್ಮ ಮೊಬೈಲ್ ಸಂಖ್ಯೆಯನ್ನು ಅಪ್ಡೇಟ್ ಮಾಡಿಕೊಂಡು ಆಧಾರ್ ಓಟಿಪಿ ಆಧಾರದ ಮೇಲೆ ಅರ್ಜಿ ಸಲ್ಲಿಸಿ ದಾಖಲಾತಿಗಳನ್ನು ಅಪ್ಡೇಟ್ ಮಾಡಿ ಶುಲ್ಕ ಪಾವತಿಸಿ ಕಚೆ?ರಿಯಲ್ಲಿ ಸಲ್ಲಿಸಿ ನೇರವಾಗಿ ಸೇವೆಗಳನ್ನು ಪಡೆಯಬಹುದು ಎಂದರು.

ಪಶ್ಚಿಮ ಪ್ರಾದೇಶಿಕ ಸಾರಿಗೆ ಕಚೇರಿಯಲ್ಲಿ ನೊಂದಣಿ ಆಗಿರುವ ಸಾರಿಗೆ ವಾಹನಗಳ ಸಂಖ್ಯೆ 55,742. ಸಾರಿಗೇತರ 11,63,369 ವಾಹನಗಳು ನೊಂದಣಿಯಾಗಿದ್ದು, ಒಟ್ಟು ಮೈಸೂರು ಜಿಲ್ಲೆಯಲ್ಲಿ 12,15,212 ವಾಹನಗಳು ಕಚೇರಿಯಲ್ಲಿ ನೋಂದಣಿಯಾಗಿವೆ ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿ ವಸಂತ್ ಈಶ್ವರ್ ಚವ್ಹಾಣ್ ತಿಳಿಸಿದರು. ಪತ್ರಿಕಾ ಗೋಷ್ಠಿಯಲ್ಲಿ ಎಆರ್‌ಟಿಓ ರಾಮಚಂದ್ರ ಉಪಸ್ಥಿತರಿದ್ದರು.

# ಜ.19 ರಿಂದ 21ರವರೆಗೆ ಚಾಲುಕ್ಯ ಉತ್ಸವ.ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ್



**ಜಮಖಂಡಿ;ಜ.14:** ಜ.19 ರದ 21ರವರೆಗೆ ಬಾದಾಮಿ, ಪಟ್ಟದಕಲ್ಲು ಹಾಗೂ ಐಹೊಳೆಯಲ್ಲಿ ಮೂರು ದಿನಗಳ ಕಾಲ ಅತ್ಯಂತ ಅದ್ದೂರಿಯಾಗಿ ಚಾಲುಕ್ಯ ಉತ್ಸವ ಆಚರಿಸಲಾಗುತ್ತಿದೆ ಎಂದು ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ್ ಹೇಳಿದರು.

ನಗರದ ತಾಲೂಕಾಡಳಿತ ಸೌಧದ ತಮ್ಮ ಕಚೇರಿಯಲ್ಲಿ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ಜನವರಿ 19ರಂದು ಬಾದಾಮಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲುಕ್ಯ ಉತ್ಸವಕ್ಕೆ ಚಾಲನೆ ನೀಡಲಿದ್ದಾರೆ. 20ರಂದು ಪಟ್ಟದಕಲ್ಲಿನಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ ಎಂದರು.

2015ರಿಂದ ಸ್ಥಗಿತಗೊಂಡಿದ್ದ ಐತಿಹಾಸಿಕ ಚಾಲುಕ್ಯ ಉತ್ಸವವನ್ನು ಮತ್ತೆ ಸಡಗರ ಸಂಭ್ರಮದಿಂದ ಆಚರಿಸಲಾಗುತ್ತಿದೆ ಎಂದರು ಸಂಜೆ ಹಾಗೂ ರಾತ್ರಿ ವೇಳೆಯಲ್ಲಿ ಖ್ಯಾತ ಸಂಗೀತ ನಿರ್ದೇಶಕರು ಮತ್ತು ಗಾಯಕರಿಂದ ರಸಮಂಜರಿ ಕಾರ್ಯಕ್ರಮ ನಡೆಯಲಿದೆ. ಗಾಯಕ ವಿಜಯ್ ಪ್ರಕಾಶ್ ಹಾಗೂ ಸಂಚಿತ್ ಹೆಗಡೆ ಅವರ ತಂಡಗಳು ಮನರಂಜನೆ ನಿಡಲಿದ್ದಾರೆ.ಸ್ಥಳೀಯ ದೇಶಿ ಹಾಗೂ ಜಾನಪದ ಕಲಾವಿದರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದೆ.ಬಾದಾಮಿ ಐತಿಹಾಸಿಕ ಸ್ಥಳಗಳ ವೀಕ್ಷಣೆಗೆ ಹೆಲಿಕಾಪ್ಟರ್ ಮೂಲಕ ಹೆಲಿಟೂರಿಸಂ ವ್ಯವಸ್ಥೆಯನ್ನೂ ಆಯೋಜಿಸಲಾಗಿದೆ.

ಕಲಾವಿದರು ಈ ವೇದಿಕೆಯನ್ನು ಸದುಪಯೋಗ ಪಡಿಸಕೊಳ್ಳ ಬಹುದು ಅದರ ಜೊತೆಗೆ ನಮ್ಮ ಚಾಲುಕ್ಯ ಉತ್ಸವ ಹಾಗೂ ನಮ್ಮ ಪರಂಪರೆಯನ್ನು ಇಡಿ ರಾಷ್ಟ್ರಕ್ಕೆ ತೂರಿಸುವಂತಹ ಉತ್ಸವ ಆಗಿರುತ್ತದೆ ಆದರಿಂದ ಸಾರ್ವಜನಿಕರು ಉತ್ಸಾಹದಿಂದ ಪಾಳಗೊಳ್ಳ ಬಹುದು ಎಂದು ಹೇಳಿದರು

# ಮುಳವಾಡ ಕಾಲುವೆಗಳಿಗೆ ನೀರು ಹರಿಸಲು ಒತ್ತಾಯಿಸಿ ರೈತರ ಬೃಹತ್ ಪ್ರತಿಭಟನೆ



**ಕೊಲ್ಹಾರ, ಜ.14:** ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕೊಲ್ಹಾರ ತಾಲೂಕ ಘಟಕದಿಂದ ಮುಳವಾಡ ಪೂರ್ವ ಹಾಗೂ ಪಶ್ಚಿಮ ಕಾಲುವೆಗಳಿಗೆ ನಿರಂತರವಾಗಿ ನೀರು ಹರಿಸುವಂತೆ ಒತ್ತಾಯಿಸಿ ತಾಲ್ಲೂಕಿನ ಮಟ್ಟಿಹಾಳ ಕ್ರಾಸ್ ನಲ್ಲಿರುವ ಕೆ ಬಿ ಜೆ ಎನ್ ಎಲ್ ಕಚೇರಿ ಎದುರುಗಡೆ ಬೃಹತ್ ಪ್ರತಿಭಟನೆಯನ್ನು ನಡೆಸಿದರು.

ಸೋಮವಾರ ತಾಲೂಕಾಧ್ಯಕ್ಷ ಸೋಮು ಬಿರಾದಾರ ನೇತೃತ್ವದಲ್ಲಿ ಹಮ್ಮಿಕೊಂಡ ಪ್ರತಿಭಟನೆಗೆ ರಾಜ್ಯ ರೈತ ಸಂಘದ ಅಧ್ಯಕ್ಷ ಚೂನಪ್ಪ ಪೂಜಾರಿ ಸಾಥ್ ನೀಡಿದರು. ಈ ವೇಳೆ ಸಾವಿರಾರು ಸಂಖ್ಯೆಯಲ್ಲಿ ಸೇರಿದ್ದ ರೈತರು ಸರ್ಕಾರ ಹಾಗೂ ನೀರಾವರಿ ಇಲಾಖೆ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿದರು.

ಪ್ರತಿಭಟನಾ ಸ್ಥಳಕ್ಕೆ ನೀರಾವರಿ ಎಜುಕೇಟಿವ್ ಇಂಜನಿಯರ್ ಭೇಟಿ ನೀಡಿ ರೈತರ ಬೇಡಿಕೆಗಳನ್ನು ಈಡೇರಿಸುವುದಾಗಿ ಭರವಸೆ ನೀಡಿದರು.

ನಂತರ ರಾಜ್ಯಾಧ್ಯಕ್ಷ ಚೂನಪ್ಪ ಪೂಜಾರಿ ಮಾತನಾಡಿ, 10 ದಿನ ಕಾಲುವೆ ನೀರನ್ನು ಬಂದ್ ಮಾಡುವುದರಿಂದ ಇಲ್ಲಿ ಬಿತ್ತಿದ ಈರುಳ್ಳಿ ಬೆಳೆ ಸಂಪೂರ್ಣವಾಗಿ ನಾಶವಾಗುತ್ತಿತ್ತು. ಹೀಗಾಗಿ 5 ದಿನ ನೀರು ಬಂದ್ ಮಾಡಬೇಕೆಂಬ ಹೋರಾಟವಿತ್ತು. ಆದರೆ ಇವತ್ತು 7ದಿನ ಬಂದ್ ಮಾಡಿ 10 ದಿನ ನೀರು ಬಿಡುವುದಕ್ಕೆ ಅಧಿಕಾರಿಗಳು ಒಪ್ಪಿಕೊಂಡಿದ್ದಾರೆ.ಏಪ್ರಿಲ್ ನಲ್ಲಿ ಕೇನಾಲ ಹೂಳು ಎತ್ತು ವುದಕ್ಕೆ ಟೆಂಡರ್ ಕರೆದು ಮೇ ನಲ್ಲಿ ಹೂಳು ಎತ್ತುವ ಕೆಲಸ ಮುಗಿಬೇಕು. ಕೇನಾಲ ಮೇಲಿನ ರಸ್ತೆಗಳನ್ನು ಸುಧಾರಣೆ ಮಾಡಬೇಕು.ಕಾಲುವೆ ನಿರ್ಮಾಣಕ್ಕೆ ಭೂಮಿ ಕಳೆದುಕೊಂಡ ಕೆಲವು ರೈತರಿಗೆ ಪರಿಹಾರ ಕೊಟ್ಟಿಲ್ಲ, ತಕ್ಷಣ ಪರಿಹಾರ ಕೊಡಿಸುವ ಕೆಲಸ ಮಾಡಬೇಕು ಎಂದು ಅಧಿಕಾರಿಗಳಿಗೆ ಒತ್ತಾಯಿಸಿದ್ದೆವೆ ಅವರು ಕೂಡಾ ಬೇಡಿಕೆ ಈಡೇರಿಸುವ ಭರವಸೆ ನೀಡಿದ್ದಾರೆ ಎಂದರು.

ತಾಲೂಕಾಧ್ಯಕ್ಷ ಸೋಮು ಬಿರಾದಾರ ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವೂ ಕೂಡ ನಮಗೆ ಸದಾ ನೀರಿನ ಸಮಸ್ಯೆ ಆಗುತ್ತಿದ್ದು,ಇದು ಆಗಬಾರದು ಎಂಬ ಕಾರಣಕ್ಕಾಗಿ ಈ ಒಂದು ಹೋರಾಟವನ್ನು ಹಮ್ಮಿಕೊಂಡಿದ್ದೇವೆ.ಇವತ್ತು ರಾಜ್ಯ ಅಧ್ಯಕ್ಷರು ನಮಗೆ ಬೆಂಬಲ ನೀಡಿದ್ದಾರೆ ಇವರಿಂದ ನಮಗೆ ನ್ಯಾಯ ದೊರಕಿದೆ ಎಂದರು. ಈ ಭಾಗದಲ್ಲಿ ಉಳ್ಳಾಗಡ್ಡಿ ಬೆಳೆಯುವ ರೈತರು ಸಾಕಷ್ಟು ಜನ ಇದ್ದು ನಮಗೆ ಏಪ್ರಿಲ್ ಅಂತ್ಯದವರೆಗೆ ನೀರನ್ನು ಪೂರೈಸಬೇಕೆಂದರು.

ಈ ವೇಳೆ ಡಿವೈಎಸ್ಪಿ ಬಲ್ಲಪ್ಪ ನಂದಗಾವಿ, ಕೆಬಿಜೆಎಲ್ ಎ ಗೋವಿಂದ ರಾಠೋಡ, ಸಿಪಿಐ ಶರಣಗೌಡ ಗೌಡರ, ಪಿಎ ಅಶೋಕ ನಾಯಕ, ಎನ್ ಟಿಪಿಸಿ ಕೂಡಗಿ ಪಿಎಸೈ ಯತೀಶ್ ಕೆ ಎನ್, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಉಪಾಧ್ಯಕ್ಷ ಕಲ್ಲಪ್ಪ ಸೋನ್ನದ, ರಾಹುಲ್ ಕುಬಕಡ್ಡಿ, ಸಂಗಮೇಶ ಸಗರ, ಟಿ.ಟಿ. ಹಗೆದಾಳ, ಶ್ರೀಶೈಲ ಅಂಗಡಿ, ಜಗದೀಶ ಸುನಗದ, ಕಲ್ಲಪ್ಪ ಗಿಡ್ಡಪ್ಪಗೋಳ, ವಿಜಯಮಾಂತೇಶ ಗಿಡ್ಡಪ್ಪಗೋಳ, ಮಂಜುನಾಥ ದ್ಯಾವಾಪೂರ, ಮಲ್ಲಪ್ಪ ಗಾಣಗೇರ, ಮುತ್ತು ಸಾಹುಕಾರ ಹಳ್ಳೂರ,ಶ್ರೀಕಾಂತ ಗಣಿ, ಮಹೇಶ ತೋಟಗೇರ, ಪ್ರದೀಪ ಪಾಟೀಲ,ಕೆಬಿಜೆಎಲ್ ಅಧಿಕಾರಿಗಳು ಸೇರಿದಂತೆ ತಾಲೂಕಿನ ಸುತ್ತಮುತ್ತಲಿನ ರೈತರು ಭಾಗವಹಿಸಿದ್ದರು.

ಈ ಮೊದಲು ಮುಳವಾಡ 1 ನೇ ಹಂತದ ಪಶ್ಚಿಮ, ಪೂರ್ವ ಕಾಲುವೆಗಳಿಗೆ 14 ದಿನ ನೀರನ್ನು ಹರಿಸಿ 10 ದಿನ ಬಂದ್ ಮಾಡಲಾಗುತ್ತಿತ್ತು ರೈತರ ಪ್ರತಿಭಟನೆ ನಂತರ ಅವರ ಬೇಡಿಕೆಯಂತೆ ಜ 16 ರಿಂದ ಏಪ್ರಿಲ್ 2 ರ ವರೆಗೆ ಕಾಲುವೆಗಳಿಗೆ 10 ದಿನ ನೀರನ್ನು ಹರಿಸಿ 7 ದಿನ ಬಂದ್ ಮಾಡಲಾಗುತ್ತದೆ

 ಗೋವಿಂದ ರಾಠೋಡ, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಮೇಲ್ವಿಚಾರಣೆ ಅಧಿಕಾರಿ (ಎಸ್ ಇ)

ಜಿಲ್ಲೆಯ ತಿಡಗುಂದಿಯ ಸುಮಾರು 1200 ಎಕರೆ ಅತ್ಯಂತ ಫಲವತ್ತಾದ ರೈತರ ಭೂಮಿಯನ್ನು ಯಾವುದೇ ಕಾರಣಕ್ಕೂ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಗೆ ಬಿಡುವುದಿಲ್ಲ, ಜಿಲ್ಲೆಯಲ್ಲಿ ಕೃಷಿಗೆ ಯೋಗ್ಯವಲ್ಲದ ಭೂಮಿಗೆ ಈ ಯೋಜನೆಯನ್ನು ಸ್ಥಳಾಂತರಿಸಬೇಕು.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯಾಧ್ಯಕ್ಷ ಚೂನಪ್ಪ ಪೂಜಾರಿ.

# ಯಾವ ಸಾಧನೆಗೆ ಸಾವಿರ ದಿನ ಸಂಭ್ರಮ:ಅರ್ ಅಶೋಕ್

**ಬೆಂಗಳೂರು, ಜ. 14–** ರಾಜ್ಯದ ಕಾಂಗ್ರೆಸ್ ಸರ್ಕಾರದ ಸಾವಿರ ದಿನಗಳ ಸಂಭ್ರಮಾಚರಣೆ ಯಾವ ಸಾಧನೆಗೆ ಎಂದು ಪ್ರಶ್ನಿಸಿರುವ ಪ್ರತಿಪಕ್ಷ ಆರ್. ಅಶೋಕ್, ನಿಮ್ಮ ಈ ಸಂಭ್ರಮ ಜನಾಕ್ರೋಶವನ್ನು ಅಣಕಿಸುವ ವಿಕೃತ ಮನಸ್ಸಿನ ಅಟ್ಟಹಾಸದಂತೆ ಕಾಣುತ್ತಿದೆ ಎಂದು ಟೀಕಿಸಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ಅವರು, ಸಾವಿರ ದಿನಗಳ ಆಡಳಿತದ ಹೆಸರಿನಲ್ಲಿ ಸಂಭ್ರಮಿಸಲು ಹೊರಟಿರುವ ನಿಮಗೆ ರಾಜ್ಯದ ವಾಸ್ತವ ಸ್ಥಿತಿಯ ಅರಿವಿದೆಯೇ ಎಂದು ಪ್ರಶ್ನಿಸಿದ್ದಾರೆ.

ನಿಮ್ಮ ಈ ಸಂಭ್ರಮಾಚರಣೆ ಯಾವ ಸಾಧನೆಗೆ, ಖಜಾನೆ ಮಾಡಿದ ಸಾಧನೆಗಾ, ನೀರು, ಹಾಲು, ಪೆಟ್ರೋಲ್–ಡೀಸೆಲ್, ಬಸ್, ಮೆಟ್ರೋ, ವಿದ್ಯುತ್, ಆಸ್ತಿ ತೆರಿಗೆ ಏರಿಸಿ ಬಡವರು, ಮಧ್ಯಮ ವರ್ಗದವರನ್ನು ಸುಲಿಗೆ ಮಾಡಿದ್ದಕ್ಕೆ ವಿಜಯೋತ್ಸವ ಆಚರಿಸುತ್ತಿದ್ದೀರಾ ಎಂದು ಕಿಡಿಕಾರಿದ್ದಾರೆ.

ನಿಮ್ಮ ಈ ಸಂಭ್ರಮ ಮೂಡಾ ಮತ್ತು ವಾಲ್ಮೀಕಿ ಹಗರಣದ ಖುಷಿಗಾ, ರೈತರ ಸಂಕಷ್ಟಕ್ಕೆ ಸ್ಪಂದಿಸದ ದರ್ಪದ ಧೋರಣೆಗಾ, ಗುತ್ತಿಗೆದಾರರ ಕಮೀಷನ್ ಕಿರುಕಳಕ್ಕಾ, ಹದಗೆಟ್ಟ ಕಾನೂನು ಸುವ್ಯವಸ್ಥೆಗಾ, ಯುವಕರ ಕನಸು ನುಚ್ಚುನೂರು ಮಾಡಿದ್ದಕ್ಕಾ, ಫೆಬ್ರವರಿ–ಮಾರ್ಚ್ ತಿಂಗಳ ಗೃಹ ಲಕ್ಷ್ಮಿ ಹಣ ಕೊಡದೆ ವಂಚನೆ ಮಾಡಿದ್ದಕ್ಕಾ, ತುಷ್ಟೀಕರಣ ರಾಜಕಾರಣವನ್ನು ಪರಾಕಾಷ್ಠೆಗೆ ಕೊಂಡೊಯ್ದಿದ್ದಕ್ಕಾ, ಬ್ರ್ಯಾಂಡ್ ಬೆಂಗಳೂರಿನ ಬವಣೆಗಾ ಎಂದು ಅವರು ಪ್ರಶ್ನಿಸಿದ್ದಾರೆ.

ರಾಜ್ಯದ ಜನತೆ ಸಂಕಷ್ಟದಲ್ಲಿರುವಾಗ ಸಾರ್ವಜನಿಕರ ತೆರಿಗೆ ಹಣದಲ್ಲಿ ಇಂತಹ ವೈಭವದ ಸಮಾವೇಶಗಳನ್ನು ಮಾಡುತ್ತಿರುವ ಕಾಂಗ್ರೆಸ್ ಸರ್ಕಾರಕ್ಕೆ ಜನರೇ ತಕ್ಕಪಾಠ ಕಲಿಸುತ್ತಾರೆ ಎಂದು ಅವರು ಟ್ವೀಟ್‌ನಲ್ಲಿ ತಿಳಿಸಿದ್ದಾರೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE